# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 134 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 08–12–2023 ಶುಕ್ರವಾರ | ಪುಟ: 4 | ಬೆಲೆ : ರೂ.2–00
Volume - 01 Issue - 134 | Title- Code: KARKAN 28269 | Chitradurga | Date: 08-12-2023 Friday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಮಾಜಿ ಸಿಎಂ ಎಸ್.ನಿಜಲಿಂಗಪ್ಪರವರ 121ನೇ ಜನ್ಮದಿನಾಚರಣೆ 2

ವಿದ್ಯಾರ್ಥಿಗಳಲ್ಲಿ ಜ್ಞಾನದ ಕೊರತೆ ನೀಗಿಸುವುದು ಶಿಕ್ಷಕರ ಕರ್ತವ್ಯ 3

ಸಿರಿಧಾನ್ಯ ಮೇಳ ಅಂಗವಾಗಿ ರಾಜ್ಯ ಮಟ್ಟದ ಸಿರಿಧಾನ್ಯ ಪಾಕ ಸ್ಪರ್ಧೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಹೊಸ ನ್ಯಾಯಬೆಲೆ ಅಂಗಡಿ ತೆರೆಯಲು ಅರ್ಜಿ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಹಿರೇಗುಂಟನೂರು ಹೋಬಳಿ ಹುಣಸೇಕಟ್ಟೆ ಗೊಲ್ಲರಹಟ್ಟಿ ಗ್ರಾಮ ಹಾಗೂ ಮೊಳಕಾಲ್ಮೂರು ತಾಲ್ಲೂಕಿನ ದೇವಸಮುದ್ರ ಹೋಬಳಿ ವಡೇರಹಳ್ಳಿ ಗ್ರಾಮಕ್ಕೆ ಪಡಿತರ ಚೀಟಿದಾರರ ಹಿತದೃಷ್ಟಿಯಿಂದ ಮತ್ತು ಸಾರ್ವಜನಿಕ ವಿತರಣಾ ವ್ಯವಸ್ಥೆಯನ್ನು ಪರಿಣಾಮಕಾರಿಗೊಳಿಸುವ ದೃಷ್ಠಿಯಿಂದ ಹೊಸದಾಗಿ ನ್ಯಾಯಬೆಲೆ ಅಂಗಡಿ ತೆರೆಯಲು ಅರ್ಜಿ ಆಹ್ವಾನಿಸಲಾಗಿದೆ. 2024ರ ಜನವರಿ 4 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಹೊಸದಾಗಿ ನ್ಯಾಯಬೆಲೆ ಅಂಗಡಿ ಮಂಜೂರು ಮಾಡಲಿರುವ ಚಿತ್ರದುರ್ಗ ತಾಲ್ಲೂಕಿನ ಹಿರೇಗುಂಟನೂರು ಹೋಬಳಿ ಹುಣಸೇಕಟ್ಟೆ ಗೊಲ್ಲರಹಟ್ಟಿ ಗ್ರಾಮದಲ್ಲಿ 8 ಎಎವೈ, 182 ಪಿಹೆಚ್‌ಹೆಚ್ ಸೇರಿದಂತೆ ಒಟ್ಟು 190 ಪಡಿತರ ಚೀಟಿಗಳಿವೆ. ಮೊಳಕಾಲ್ಮೂರು ತಾಲ್ಲೂಕಿನ ದೇವಸಮುದ್ರ ಹೋಬಳಿ ವಡೇರಹಳ್ಳಿ ಗ್ರಾಮದಲ್ಲಿ 22 ಎಎವೈ, 73 ಪಿಹೆಚ್‌ಹೆಚ್, 4 ಎನ್.ಪಿ.ಹೆಚ್.ಹೆಚ್ ಸೇರಿದಂತೆ ಒಟ್ಟು 99 ಪಡಿತರ ಚೀಟಿಗಳಿವೆ. ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ಧೃಡೀಕೃತ ದಾಖಲೆಗಳೊಂದಿಗೆ ಪ್ರಕಟಣೆ ಹೊರಡಿಸಿದ ದಿನಾಂಕದಿಂದ 30 ದಿನದೊಳಗೆ ಜಂಟಿ ನಿರ್ದೇಶಕರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾಧಿಕಾರಿಗಳ ಕಚೇರಿ, ಚಿತ್ರದುರ್ಗ ಇವರಿಗೆ ಸಲ್ಲಿಸಲು ತಿಳಿಸಿದೆ. ನಿಗಧಿತ ಅವಧಿಯ ನಂತರ ಸಲ್ಲಿಕೆಯಾಗುವ ಅಥವಾ ಬೇರೆ ಕಚೇರಿಯಲ್ಲಿ ಸಲ್ಲಿಕೆಯಾಗುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.ನಿಗಧಿತ ಅರ್ಜಿ "ಎ" ಅನ್ನು ಜಂಟಿ ನಿರ್ದೇಶಕರು, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಚಿತ್ರದುರ್ಗ ಕಚೇರಿಯಿಂದ ಅಥವಾ ಸಂಬಂಧಪಟ್ಟ ತಾಲ್ಲೂಕು ಕಚೇರಿಯಲ್ಲಿ ಪಡೆಯಬಹುದು.

### 16ರಂದು ವಿಜಯ ದಿವಸ

» ಚಿತ್ರದುರ್ಗ

ಇದೇ ಡಿಸೆಂಬರ್ 16ರಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ವತಿಯಿಂದ 1971ರ ಯುದ್ಧದಲ್ಲಿ ಸಕ್ರಿಯವಾಗಿ ಭಾಗವಹಿಸಿದ ಮಾಜಿಕ ಸೈನಿಕರಿಗೆ ಸರಳ ಸಮಾರಂಭದಲ್ಲಿ ಸನ್ಮಾನಿಸುವ ಮೂಲಕ ವಿಜಯ ದಿವಸ ಆಚರಿಸಲು ಉದ್ದೇಶಿಸಲಾಗಿದೆ. 1971ರ ಯುದ್ಧದಲ್ಲಿ ಸಕ್ರಿಯವಾಗಿ ಭಾಗವಹಿಸಿರುವ ಮಾಜಿ ಸೈನಿಕರು ತಮ್ಮ ಮಾಜಿ ಸೈನಿಕರ ಗುರುತಿನ ಚೀಟಿ ಮತ್ತು ಪೂರ್ವ ಅಥವಾ ಪಶ್ಚಿಮಿ ಮೆಡಲ್‌ಗಳನ್ನು ಹೊಂದಿರುವ ಸ್ವವಿರಗಳನ್ನೊಳಗೊಂಡ ಮಾಹಿತಿಯನ್ನು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಇವರಿಗೆ ಮಿಂಚಂಚೆ soldiersshimoga@gmail.com ರ ಮುಖಾಂತರ ಅಥವಾ ದೂರವಾಣಿ ಸಂಖ್ಯೆ 08182–220925 ಗೆ ಕರೆ ಮಾಡಿ ಡಿ.13 ರೊಳಗಾಗಿ ಮಾಹಿತಿಯನ್ನು ನೀಡಿ ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08182–220925ಗೆ ಹಾಗೂ ಕಚೇರಿಯನ್ನು ಸಂಪರ್ಕಿಬಹುದು ಎಂದು ಶಿವಮೊಗ್ಗ ಸೈನಿಕ ಕಲ್ಯಾಣ ಮತ್ತ ಪುನರ್ವಸತಿ ಇಲಾಖೆ ಉಪ ನಿರ್ದೇಶಕ ಡಾ.ಸಿ.ಎ.ಹಿರೇಮಠ ತಿಳಿಸಿದ್ದಾರೆ.

### ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಹೆಚ್.ಎ.ಎಲ್‌ಯಲ್ಲಿ ಫಿಟ್ಟರ್, ಟರ್ನರ್, ಮೆಷಿನಿಷ್ಟ್, ವೆಲ್ಡರ್, ಛಿಠಿಠಿಚಿ, ಫೌಂಡ್ರಿ–ಮ್ಯಾನ್, ಶೀಟ್ ಮೆಟಲ್ ವರ್ಕರ್, ಕಾರ್ಪೆಂಟರ್, ಮೆಕ್ಯಾನಿಕ್ ಖಿ&ಂಆ ಟೂಲ್ ಮತ್ತು ಡೈ ಮೇಕರ್ ಮತ್ತು ಅಡ್ವಾನ್ಡ್ ಅಓಅ ಮೆಷಿನಿಂಗ್ ಟ್ರೇಡಗಳಿಗೆ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಡಿ.30 ಆಗಿರುತ್ತದೆ. ಕರ್ನಾಟಕ ರಾಜ್ಯದ ಮಾನ್ಯತೆ ಪಡೆದ ಐಟಿಐಗಳಿಂದ ಕ್ರಾಫ್ಟ್‌ಮೆನ್ ಟ್ರೈನಿಂಗ್ ಸ್ಕೀಮ್ ಸಿಟಿಎಸ್ ನಲ್ಲಿ ಉತ್ತೀರ್ಣರಾಗಿರಬೇಕು, ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಐ.ಟಿ.ಐ ಪ್ರಮಾಣ ಪತ್ರ ನಕಲು, ಎನ್.ಟಿ.ಸಿ ಯ ನಕಲು (ನ್ಯಾಷನಲ್ ಟ್ರೇಡ್ ಸರ್ಟಿಫಿಕೇಟ್), ಜಾತಿ ಪ್ರಮಾಣ ಪತ್ರ, ಅಂಗವಿಕಲರ ಪ್ರಮಾಣ ಪತ್ರ, ಮಾಜಿ ಸೈನಿಕ ಅವಲಂಬಿತ ಪ್ರಮಾಣ ಪತ್ರದ ಪ್ರತಿ, ಆಧಾರ್ ಕಾರ್ಡ್ ಮತ್ತು ಪಾನ್ ಕಾರ್ಡ್, ಇ–ಪಾನ್ ಪ್ರತಿ, www.apprenticeshipindia.org/candidate-registration ಪೋರ್ಟಲ್‌ನಲ್ಲಿ ನೋಂದಣಿ ಮಾಡಿರುವ ಪ್ರತಿ ತರಬೇಕು. ಅರ್ಜಿ ಸಲ್ಲಿಸಲುಜಿಲ್ಲಾಉದ್ಯೋಗವಿನಿಮಯಕಚೇರಿಯಲ್ಲಿ ನೋದಾಯಿಸಿ ಕೊಳ್ಳಬೇಕು. ಮಾಹಿತಿಗಾಗಿ 9945587060 ಗೆ ಸಂಪರ್ಕಿಸಬಹುದು.

ಹಾಲು ಉತ್ಪಾದಕರ ಸಹಕಾರ ಸಂಘಗಳ ಕಾರ್ಯದರ್ಶಿಗಳಿಗೆ ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮದಲ್ಲ ಕೆಎಂಎಫ್ ನಿರ್ದೇಶಕ ವೀರಭದ್ರಬಾಬು

# ಹಾಲು ಉತ್ಪಾದನೆ ಭಾರತ ವಿಶ್ವದಲ್ಲಿ ಪ್ರಥಮ

» ಚಿತ್ರದುರ್ಗ

ಇತ್ತೀಚಿನ ದಿನಗಳಲ್ಲಿ ಭಾರತ ದೇಶ ಹೈನುಗಾರಿಕೆಯಲ್ಲಿ ಗಣನೀಯ ಪ್ರಮಾಣದಲ್ಲಿ ಪ್ರಗತಿ ಸಾಧಿಸಿದೆ. ಇದರಿಂದಾಗಿ ಭಾರತ ದೇಶ ಹಾಲು ಉತ್ಪಾದನೆಯಲ್ಲಿ ವಿಶ್ವದಲ್ಲಿ ಪ್ರಥಮ ರಾಷ್ಟ್ರವೆನಿಸಿದೆ ಎಂದು ಸಹಕಾರ ರತ್ನ ಪುರಸ್ಕೃತರು ಹಾಗೂ ಕೆಎಂಎಫ್ ನಿರ್ದೇಶಕ ವೀರಭದ್ರಬಾಬು ಹೇಳಿದರು.

ಹೊಸದುರ್ಗ ಎಪಿಎಂಸಿ ಆವರಣದ ರೈತ ಭವನದಲ್ಲಿ ಬುಧವಾರ ಸಹಕಾರ ಇಲಾಖೆ, ರಾಜ್ಯ ಸಹಕಾರ ಮಹಾಮಂಡಳ ಹಾಗೂ ಜಿಲ್ಲಾ ಸಹಕಾರ ಯೂನಿಯನ್ ವತಿಯಿಂದ ಹಮ್ಮಿಕೊಂಡಿದ್ದ ಹೊಸದುರ್ಗ ಮತ್ತು ಹೊಳಲ್ಕೆರೆ ತಾಲ್ಲೂಕುಗಳಲ್ಲಿ ಬರುವ ಹಾಲು ಉತ್ಪಾದಕರ ಸಹಕಾರ ಸಂಘಗಳ ಕಾರ್ಯದರ್ಶಿಗಳಿಗೆ ಒಂದು ದಿನದ ವಿಶೇಷ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಹೈನು ಉದ್ಯಮ ಹೆಚ್ಚಿನ ಪ್ರಗತಿ ಸಾಧಿಸಬೇಕಾದರೆ ಹಾಲಿನ ಉತ್ಕೃಷ್ಟ ಗುಣಮಟ್ಟ ಹೊಂದಿರಬೇಕು ಎಂದು ತಿಳಿಸಿದರು.

ಸಹಕಾರ ರತ್ನ ಪುರಸ್ಕೃತರು ಹಾಗೂ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಜಿಂಕಲ್ ಬಸವರಾಜ್ ಮಾತನಾಡಿ, ಸಹಕಾರ ಸಂಘಗಳ ಕಾರ್ಯದರ್ಶಿಗಳು, ಅಧ್ಯಕ್ಷರು ಇಂತಹ ತರಬೇತಿ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಈ ತರಬೇತಿಯ ಸಂಪೂರ್ಣ ಮಾಹಿತಿ



ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಸಹಕಾರ ಸಂಘಗಳ ಅಭಿವೃದ್ಧಿಗೆ ಸಂಘದ ಅಧ್ಯಕ್ಷರು ಮತ್ತು ಮುಖ್ಯಕಾರ್ಯನಿರ್ವಾಹಕರ ಜವಾಬ್ದಾರಿ, ಕರ್ತವ್ಯ ಬಹಳ ಮುಖ್ಯವಾಗಿದೆ. ಈ ತರಬೇತಿಯಲ್ಲಿ ಇತ್ತೀಚಿನ ಕಾನೂನು, ಲೆಕ್ಕಪತ್ರಗಳನ್ನುಈತರಬೇತಿಕಾರ್ಯಕ್ರಮದ ಮೂಲಕ ತಿಳಿದುಕೊಳ್ಳಬೇಕು ಹಾಗೂ ಇಂತಹ ತರಬೇತಿಯ ಸದುಪಯೋಗಪ 'ಡೆದುಕೊಳ್ಳಬೇಕು ಎಂದು ತಿಳಿಸಿದರು.

ಶಿವಮೊಗ್ಗ ಹಾಲು ಒಕ್ಕೂಟ ನಿರ್ದೇಶಕ ಜಿ.ಪಿ.ಯಶವಂತರಾಜ್ ಮಾತನಾಡಿ, ನಮ್ಮ ದೇಶ ಹಾಲು ಗುಣಮಟ್ಟ, ಹಾಲು ಉತ್ಪಾದನೆಯಲ್ಲಿಮೊದಲನೇಸ್ಥಾನದಲ್ಲಿದ್ದು, ಕರ್ನಾಟಕ ರಾಜ್ಯ ಎರಡನೇ ಸ್ಥಾನದಲ್ಲಿದೆ ಎಂದು ತಿಳಿಸಿದರು. ಚಿತ್ರದುರ್ಗ ಮತ್ತು ಹೊಸದುರ್ಗ ತಾಲ್ಲೂಕುಗಳಲ್ಲಿ ಹಾಲು ಜಾಸ್ತಿ ಉತ್ಪಾದನೆಯಾಗುತ್ತಿದೆ. ಹಾಲು ಉತ್ಪಾದಕರ ಸಹಕಾರ ಸಂಘಗಳ ಕಾರ್ಯದರ್ಶಿಗಳು ಲೆಕ್ಕಪರಿಶೋಧನೆಗೆ ಹೆಚ್ಚು ಗಮನ ನೀಡಬೇಕು. ಲೆಕ್ಕಪತ್ರಗಳು ಸರಿಯಾಗಿ ನಿರ್ವಹಣೆ ಮಾಡಬೇಕು. ಇಂತಹ ತರಬೇತಿ ಕಾರ್ಯಕ್ರಮಗಳಲ್ಲಿ ಇದರ ಬಗ್ಗೆ ಮಾಹಿತಿ ಪಡೆದು, ತಿಳಿದುಕೊಂಡು ಇದರ ಸದುಪಯೋಗಪ 'ಡೆದುಕೊಳ್ಳಬೇಕು ಎಂದು ತಿಳಿಸಿದರು.

ಸಹಕಾರ ರತ್ನ ಪುರಸ್ಕೃತರು ಹಾಗೂ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕ ಜಿ.ಈ.ಅಜ್ಜಪ್ಪ ಮಾತನಾಡಿ, ಹಾಲು ಉತ್ಪಾದಕರ ಸಹಕಾರ ಸಂಘಗಳು ಈ ಬಾರಿಯ ಸಹಕಾರಿ ಸಪ್ತಾಹವನ್ನು ಯಶಸ್ವಿಯಾಗಿ ನೆರವೇರಿಸಿರುವುದು ಸಂತಸ ಉಂಟುಮಾಡಿದೆ ಎಂದು ತಿಳಿಸಿದ ಅವರು, ಹೊಸದುರ್ಗ ತಾಲ್ಲೂಕು ಹಾಲು ಉತ್ಪಾದಕರ ಸಹಕಾರ ಸಂಘಗಳ ವಿಸ್ತರಣಾಧಿಕಾರಿ ಕೃಷ್ಣಪ್ಪ ಅವರಿಗೆ ಅಭಿನಂದನೆ ಸಲ್ಲಿಸಿದರು.

ಶಿವಮೊಗ್ಗ ಹಾಲು ಒಕ್ಕೂಟ ನಿರ್ದೇಶಕಿ ಭಾಗ್ಯ ಕಾಂತರಾಜ್ ಮಾತನಾಡಿ, ಹಾಲು ಉತ್ಪಾದಕರು ಶುಚಿಯಾಗಿ ಶುದ್ಧವಾಗಿ ಹಾಲು ಶೇಖರಣೆ ಮತ್ತು ಉತ್ಪಾದನೆ ಮಾಡಬೇಕೆಂದು ತಿಳಿಸಿದರು.

ಶಿವಮೊಗ್ಗ ಹಾಲು ಒಕ್ಕೂಟ ವ್ಯವಸ್ಥಾಪಕ ನಿರ್ದೇಶಕ ಎಸ್.ಜಿ.ಶೇಖರ್ ಮಾತನಾಡಿ, ಜಿಲ್ಲಾ ಸಹಕಾರ ಯೂನಿಯನ್ ಅವರು ಸಹಕಾರ ಕ್ಷೇತ್ರದಲ್ಲಿ ಸಹಕಾರ ಶಿಕ್ಷಣ, ಪ್ರಚಾರ ಕೆಲಸ ನಿರ್ವಹಿಸುತ್ತಿದ್ದು, ಈ ರೀತಿ ತರಬೇತಿ ಕಾರ್ಯಕ್ರಮಗಳನ್ನು ಸಹಕಾರ ಸಂಘಗಳ ಕಾರ್ಯದರ್ಶಿಗಳಿಗೆ ಮತ್ತು ಆಡಳಿತ ಮಂಡಳಿಯವರಿಗೆ ನಿರಂತರವಾಗಿ ನೀಡಬೇಕು ಕಾರ್ಯದರ್ಶಿಗಳಿಗೆ ಮತ್ತು ಆಡಳಿತ ಮಂಡಳಿಯವರಿಗೆ ಸಹಕಾರ ಸಂಘಗಳ ಕಾಯ್ದೆ ಕಾನೂನು ಬಗ್ಗೆ ಇತ್ತೀಚಿನ ತಿದ್ದುಪಡಿಗಳ ಬಗ್ಗೆ ಮತ್ತು ಲೆಕ್ಕಪರಿಶೋಧನೆ ಬಗ್ಗೆ ಮಾಹಿತಿ ನೀಡಬೇಕು ಇದು ಹಾಲು ಉತ್ಪಾದಕರ ಸಹಕಾರ ಸಂಘಗಳಿಗೆ ಅತಿ ಅವಶ್ಯಕವಾಗಿದೆ ಎಂದರು.

ನಮ್ಮ ರಾಜ್ಯ ಹಾಲು ಉತ್ಪಾದನೆಯನ್ನು ಅತಿ ಹೆಚ್ಚು ಹಾಲು ಉತ್ಪಾದನೆಯನ್ನು ಮಾಡಿ 24,000 ಕೋಟಿ ವಹಿವಾಟು ಮಾಡಿದೆ. ಶೇ.13.5 ಹಾಲು ಉತ್ಪಾದನೆ ಜಾಸ್ತಿಯಾಗಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಹೊಸದುರ್ಗ ತಾಲ್ಲೂಕು ಶೇ.99ರಷ್ಟು ಗುಣಮಟ್ಟದ ಹಾಲನ್ನು ಉತ್ಪಾದನೆ ಮಾಡಿದೆ ಎಂದು ತಿಳಿಸಿದರು.

ಪುಟ 3

## ಅಂಬೇಡ್ಕರ್ ಪರಿನಿರ್ವಾಹಣ: ಜಮೀನಿನಲ್ಲಿ ಸರಳ ಆಚರಣೆ

» ಚಳ್ಳಕೆರೆ

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರ 67ನೇ ಪರಿನಿಬ್ಬಾಣ ದಿನವನ್ನು ತಾಲ್ಲೂಕಿನ ದೇವರಮರಿಕುಂಟೆ ಕಾವಲು ಪ್ರದೇಶದ ಜಮೀನಿನಲ್ಲಿ ಪ್ರಗತಿಪರ ರೈತ ಡಾ.ಆರ್.ಎ.ದಯಾನಂದಮೂರ್ತಿ ತಮ್ಮ ಕೃಷಿಯ ಜೊತೆಯಲ್ಲೇ ಪರಿನಿರ್ವಾಣವನ್ನು ಸರಳವಾಗಿ ಆಚರಿಸಿದರು. ದೇಶದ ಬೆನ್ನೆಲುಬು ರೈತನಾದ್ದರಿಂದ ರಾಷ್ಟ್ರದ ಸಂವಿಧಾನದ ಮೂಲಕ ರಾಷ್ಟ್ರವನ್ನು ಪ್ರಗತಿಯತ್ತ ಕೊಂಡೊಯುವ ಕಾರ್ಯವನ್ನು ಅಂಬೇಡ್ಕರ್ ಸಂವಿಧಾನ ನಮಗೆ ನೀಡಿದ್ದು, ಈ ಹಿನ್ನೆಲೆಯಲ್ಲಿ ಅವರ ಪರಿನಿರ್ವಾಣವನ್ನು ಜಮೀನಿನಲ್ಲೇ ಸರಳವಾಗಿ ಆಚರಿಸುತ್ತಿದೆ ಎಂದರು. ರೈತರಾದ ಅಂಜಿನಮ್ಮ, ಗುಡ್ಲ ಓಬಣ್ಣ, ಕೆಂಚಮ್ಮ, ಮೋಹನ, ತಿಮ್ಮಣ್ಣ ಮುಂತಾದವರು ಉಪಸ್ಥಿತರಿದ್ದರು.



## ಆಗ್ನೇಯ ಶಿಕ್ಷಕರ ಕ್ಷೇತ್ರಕ್ಕೆ ಲೋಕೇಶ್ ತಾಳಿಕಟ್ಟೆ ಅಭ್ಯರ್ಥಿ

ದಾವಣಗೆರೆ: ನೊಂದಾಯಿತ ಅನುದಾನ ರಹಿತ ಖಾಸಗಿ ಶಾಲಾ ಆಡಳಿತ ಮಂಡಳಿಗಳ ಒಕ್ಕೂಟದ ವತಿಯಿಂದ ಆಗ್ನೇಯ ಶಿಕ್ಷಕರ ಕ್ಷೇತ್ರಕ್ಕೆ ಲೋಕೇಶ್ ತಾಳಿಕಟ್ಟೆ ಅವರು ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಲಿದ್ದಾರೆ ಎಂದು ಒಕ್ಕೂಟದ ದಾವಣಗೆರೆ ಜಿಲ್ಲಾಧ್ಯಕ್ಷ ಟಿ.ಎಂ. ಉಮಾಪತ್ಯ ಹೇಳಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಸ್ತುತ ಸರ್ಕಾರವು ಸೇರಿಕೊಂಡಂತೆ ಕಳೆದ ಹಲವು ದಶಕಗಳಿಂದ ಆಳಿರುವ ಸರ್ಕಾರಗಳು ಶಿಕ್ಷಣ ಹಾಗೂ ಅದರ ರೂವಾರಿಗಳಾದ ಶಿಕ್ಷಕರನ್ನು ನಿರಂತರವಾಗಿ ಕಡೆಗಣಿಸುತ್ತಾ ಬಂದಿವೆ.

ಪುಟ 4




## ಫಾಸ್ಟ್ ನ್ಯೂಸ್

### ಡಿ.10 ರಂದು ಕನಕ ಜಯಂತ್ಯೋತ್ಸವ

» ಪರಶುರಾಂಪುರ

ಪರಶುರಾಂಪುರ ಹೋಬಳಿ ಸಮೀಪದ ಪಿ.ಮಹದೇವಪುರದಲ್ಲಿ ಡಿ.10 ಭಾನುವಾರ ಶ್ರೀ ಕನಕ ಯುವಕ ಸಂಘದ ವತಿಯಿಂದ ಉಣ್ಣೆ ಕೈ ಮಗ್ಗದ ನೇಕಾರರ ಸಂಘದ ಆವರಣದಲ್ಲಿ ಶ್ರೀ ಕನಕ ಜಯಂತ್ಯುತ್ಸವ ಹಮ್ಮಿಕೊಳ್ಳಲಾಗಿದೆ. ಶ್ರೀ ರೇವಣ್ಣ ಸಿದ್ದೇಶ್ವರ ಹಾಲುಮತ ಮಹಾಸಂಸ್ಥಾನ ಗುರುಪೀಠದ ಎನ್.ಪ್ರಕಾಶ್ ಒಡೆಯರ್ ದಿವ್ಯಾ ಸಾನಿಧ್ಯವನ್ನುವಹಿಸುವರು.ಶಾಸಕಟಿ.ರಘುಮೂತಿ9 ಕಾಯ9ಕಾಯ9ಕ್ರಮವನ್ನ ಉದ್ಘಾಟಿಸುವರು.ಎಸ್ ನಾಗರಾಜ ಇವರು ಅಧ್ಯಕ್ಷತೆಯಲ್ಲಿ ಜರುಗುವುದು. ಜಯಂತಿ ಅಂಗವಾಗಿ ಕನಕದಾಸರ ಭಾವಚಿತ್ರಕ್ಕೆ ಹೂವಿನ ಅಲಂಕಾರದೊಂದಿಗೆ ಕುಂಭ ಕಳಸಗಳೊಂದಿಗೆ ಜನಾಪದ ತಂಡಗಳು ಮೂಲಕ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಜರುಗುವುದು. ವೇದಿಕೆಯಲ್ಲಿ ಕಾಯ9ಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ರೇವಣ್ಣಸಿದ್ದೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷ ಆರ್ ಮಲ್ಲೇಶಪ್ಪ , ನಗರಸಭೆಯ ಮಾಜಿ ಸ್ಥಾಯಿ ಸಮಿತಿ ಅಧ್ಯಕ್ಷ ಎಂ ಜೆ ರಾಘವೇಂದ್ರ , ಕೆಪಿಸಿಸಿ ಸದಸ್ಯ ಕಂದಿಕೆರೆ ಸುರೇಶ್ ಬಾಬು , ನಿವೃತ್ತ ಡೆಪ್ಯೂಟಿ ತಹಶೀಲ್ದಾರ್ ಸಿ.ರಾಮಕೃಷ್ಣ , ಪರಶುರಾಮ ಗೌಡ , ಕೆ.ನಾಗರಾಜ , ಸಿ.ಮಲ್ಲಿಕಾಜು9ನ ಆರ್. ಗುರುಸ್ವಾಮಿ, ಟಿ.ಬಸವರಾಜ , ಸಿ.ವೀರನಾಯಕ , ಎಸ್.ಸುಧೀರ್ ಭಾಗವಹಿಸುವರು. ಪ್ರಾಂಶುಪಾಲ ಎಂ.ಶಿವಲಿಂಗಪ್ಪ ವಿಶೇಷ ಉಪನ್ಯಾಸ ನೀಡುವರು.ಪ್ರಾಧ್ಯಾಪಕರಾದ ಡಾ. ಸಿ.ಚನ್ನಕೇಶವ , ಡಾ.ಶಿವಣ್ಣ ಪಿಎ▯▯▯ ಬಸವರಾಜು , ಕೆಇಬಿಯ ಎಸ್ ಓ ಶಿವಕುಮಾರ್ ಇರುವವರು.ಅತಿಥಿಗಳಾಗಿ ಗ್ರಾಪಂ ಅಧ್ಯಕ್ಷೆ ಕವಿತಾ , ಉಪಾಧ್ಯಕ್ಷ ಓಬಳೇಶ್ ಸೇರಿದಂತೆ ಗ್ರಾಪಂ ಸದಸ್ಯರು ಪಾಲ್ಗೊಳ್ಳುವರು. ಸಂಘದ ಉಪಾಧ್ಯಕ್ಷ ಈ.ನಾಗರಾಜ ಸೇರಿದಂತೆ ನಿರ್ದೇಶಕರು ಉಪಸ್ಥಿತರಿರುವರು.

### ಡಿ.10ರಂದು ಸಾಂಸ್ಕೃತಿಕ ಸೌರಭ ಕಾರ್ಯಕ್ರಮ

» ಚಿತ್ರದುರ್ಗ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ವಿಶ್ವ ಮಾನವ ಸಾಂಸ್ಕೃತಿಕ ಮತ್ತು ವಿದ್ಯಾಸಂಸ್ಥೆ, ವಿಶ್ವಮಾನವ ಸಂಯುಕ್ತ ಪದವಿ ಪೂರ್ವ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ "ಸಾಂಸ್ಕೃತಿಕ ಸೌರಭ" ಕಾರ್ಯಕ್ರಮವನ್ನು ಇದೇ ಡಿಸೆಂಬರ್ 10ರಂದು ಸಂಜೆ 4ಕ್ಕೆ ಚಿತ್ರದುರ್ಗದ ಸೀಬಾರ-ಗುತ್ತಿನಾಡು ವಿಶ್ವ ಮಾನವ ಸಾಂಸ್ಕೃತಿಕ ಮತ್ತು ವಿದ್ಯಾಸಂಸ್ಥೆಯಲ್ಲಿ ಹಮ್ಮಿಕೊಳ್ಳಲಾಗಿದೆ. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಉದ್ಘಾಟನೆ ನೆರವೇರಿಸುವರು. ಮಠದ ಕುರುಬರಹಟ್ಟಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಆರ್.ಗಣೇಶ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಉಪವಿಭಾಗಾಧಿಕಾರಿ ಎಂ.ಕಾರ್ತೀಕ್, ತಹಶೀಲ್ದಾರ್ ಡಾ.ನಾಗವೇಣಿ, ತಾಲ್ಲೂಕು ಪಂಚಾಯಿತಿ ಇಒ ಹೆಚ್.ಹನುಮಂತಪ್ಪ, ಮಠದ ಕುರುಬರಹಟ್ಟಿ ಉಪಾಧ್ಯಕ್ಷೆ ರೇಷ್ಮಬಾನು, ಪಿಡಿಓ ಪಿ.ಎಸ್.ಸಂತೋಷ್, ಗ್ರಾಮ ಪಂಚಾಯಿತಿ ಸದಸ್ಯರಾದ ಬಿ.ಎನ್.ಶಂಕರಮ್ಮ, ಎನ್.ಕಲ್ಲೇಶಪ್ಪ, ರಾಮಾಂಜನೇಯ, ಗುತ್ತಿನಾಡು ವಿಶ್ವಮಾನವ ಸಾಂಸ್ಕೃತಿಕ ವಿದ್ಯಾಸಂಸ್ಥೆ ಅಧ್ಯಕ್ಷ ಹೆಚ್.ಬುಡೆನ್ ಸಾಬ್, ಕಾರ್ಯದರ್ಶಿ ಎಂ.ನೀಲಕಂಠದೇವ, ರೂವಾರಿ ಹೆಚ್.ಜಲೀಲ ಸಾಬ್ ಭಾಗವಹಿಸುವರು. ಸಾಂಸ್ಕೃತಿಕ ಸೌರಭ ಕಾರ್ಯಕ್ರಮದ ಅಂಗವಾಗಿ ಸುಗಮ ಸಂಗೀತ, ಜಾನಪದ ಸಂಗೀತ, ಜನಪದ ಗೀತೆಗಳು, ಸಮೂಹ ನೃತ್ಯ, ಕಿಂದರ ಜೋಗಿ ಕುಣಿತ, ನಾಸಿಕ್ ಡೋಲು, ಗಮಕ ಗಾಯನ, ಡೊಳ್ಳು ಕುಣಿತ, ನಾಟಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್.ಕೆ.ಮಲ್ಲಿಕಾರ್ಜುನ ತಿಳಿಸಿದ್ದಾರೆ.

### ಮಕ್ಕಳ ದಿನಾಚರಣೆ ಕಾರ್ಯಕ್ರಮ

» ದಾವಣಗೆರೆ

ರಾಜ್ಯ ಹಾಗೂ ಜಿಲ್ಲಾ ಬಾಲಭವನ ಸೊಸೈಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಡಿ.8 ರಂದು ಬೆಳಿಗ್ಗೆ 11.30ಕ್ಕೆ ನಗರದ ಜೆ.ಹೆಚ್ ಪಟೇಲ್ ಬಡಾವಣೆಯ ಜಿಲ್ಲಾ ಬಾಲಭವನದಲ್ಲಿ ಮಕ್ಕಳ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಹಾಗೂ ಜಿಲ್ಲಾ ಬಾಲಭವನ ಸಮಿತಿಯ ಅಧ್ಯಕ್ಷರಾದ ಸುರೇಶ್.ಬಿ.ಇಟ್ನಾಳ್ ಉದ್ಘಾಟಿಸುವರು. ಪಾಲಿಕೆ ಆಯುಕ್ತರು ಹಾಗೂ ಜಿಲ್ಲಾ ಬಾಲಭವನ ಸಮಿತಿಯ ಸದಸ್ಯರಾದ ರೇಣುಕಾ ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರರು ಹಾಗೂ ಜಿಲ್ಲಾ ಬಾಲಭವನ ಸಮಿತಿಯ ಸದಸ್ಯರಾದ ನರೇಂದ್ರ ಬಾಬು, ಜಿಲ್ಲಾ ಉಪ ಅರಣ್ಯ ಸಂರಕ್ಷಣಾಧಿಕಾರಿ ಹಾಗೂ ಜಿಲ್ಲಾ ಬಾಲಭವನ ಸಮಿತಿಯ ಸದಸ್ಯರಾದ ಶಶಿಧರ್, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆಯ ಉಪನಿರ್ದೇಶಕ ಹಾಗೂ ಜಿಲ್ಲಾ ಬಾಲಭವನ ಸಮಿತಿಯ ಸದಸ್ಯರಾದ ಜಿ.ಕೊಟ್ರೇಶ್, ತೋಟಗಾರಿಕೆ ಇಲಾಖೆಯ ಉಪ ನಿರ್ದೇಶಕ ಹಾಗೂ ಜಿಲ್ಲಾ ಬಾಲಭವನ ಸಮಿತಿಯ ಸದಸ್ಯರಾದ ರಾಘವೇಂದ್ರ ಪ್ರಸಾದ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ, ಡಿ.ಸಿ.ಪಿ.ಒ ಹಾಗೂ ನಿರೂಪಣಾಧಿಕಾರಿ ರಾಜ್ ಕುಮಾರ್ ರಾಠೋಡ್ ಭಾಗವಹಿಸುವರು.

# ಕಾವಿ ಹಾಕಿದವರೆಲ್ಲ ಸ್ವಾಮೀಗಳಾಗುವುದಿಲ್ಲ

» ಚಿತ್ರದುರ್ಗ




ಕಾವಿಹಾಕಿದವರೆಲ್ಲಸ್ವಾಮೀಗಳಾಗುವುದಿಲ್ಲ, ಕಬೀರಾನಂದ ಶ್ರೀಗಳು ಗುರುಪಾದಕ್ಕೆ ಸಮರ್ಥನೀಯವಾಗಿದ್ದರು, ದುಃಖವನ್ನು ಕಳೆಯುವಂತ ಶಕ್ತಿ ಅವರಲ್ಲಿ ಇತ್ತು, ಅವರ ನುಡಿಯೇ ವೇದ ವಾಕ್ಯವಾಗಿತ್ತು. ಗುರು ಭಕ್ತಿಯಲ್ಲಿ.ಶ್ರದ್ದೆ ಉಳ್ಳವರಾಗಿದ್ದರು, ಅವರ ವಾಕ್ಯ ಪರಿಪಾಲನೆಯಿಂದ ಇಷ್ಟೆಲ್ಲಾ ಆಗಲಿಕ್ಕೆ ಕಾರಣವಾಯಿತೆಂದು ಶ್ರೀ ಗುರು ಕಬೀರಾನಂದಾಶ್ರಮದ ಪೀಠಾಧ್ಯಕ್ಷರಾದ ಶ್ರೀ ಶಿವಲಿಂಗಾನಂದ ಶ್ರೀಗಳು ತಿಳಿಸಿದರು.

ನಗರದ ಕಬೀರಾನಂದಾಶ್ರಮ ದವತಿಯಿಂದ ಶ್ರೀ ಸದ್ಗುರು ಕಬೀರಾನಂದ ಶ್ರೀಗಳು 67ನೇ ಹಾಗೂ ಶ್ರೀ ಸದ್ಗುರು ಕಬೀರೇಶ್ವರ ಶ್ರೀಗಳ 57ನೇ ಪುಣ್ಯಾರಾಧನೆಯ ಸಮಾರೋಪ ಸಮಾರಂಭವೂ ಶ್ರೀ ಸದ್ಗುರು ಕಬೀರಾನಂದಾಶ್ರಮ ಆವರಣದಲ್ಲಿ ಡಿ.6ರ ಸಂಜೆ ಹಮ್ಮಿಕೊಂಡಿದ್ದು ಅದರ ಸಾನಿಧ್ಯವಹಿಸಿ ಮಾತನಾಡಿದ ಶ್ರೀಗಳು, ಸನ್ಯಾಸಿಯಾದವನಿಗೆ ಪೂರ್ವಾಶ್ರಮದ ಸಂಭಂದ ಇರಬಾರದು, ಎಲ್ಲವನ್ನು ತೊರೆದವನು ಸನ್ಯಾಸಿಯಾಗಲು ಸಾಧ್ಯವಿದೆ. ಆತನಿಗೆ ಯಾವುದೇ ರೀತಿ ಸಂಬಂಧಗಳು ಇರಬಾರದು ಇದ್ದರೆ ಆತ ಸನ್ಯಾಸಿಯಾಗಲಾರ, ಇಂದು ಈ ಇಬ್ಬರು ಮಹಾನ್ ಪುರುಷರ ಸ್ಮರಣೆಯ ದಿನವಾಗಿದೆ, ಕಬೀರಾನಂದ ಶ್ರೀಗಳು ಪ್ರಾರಂಭದಲ್ಲಿ ಇಲ್ಲಿಗೆ ಆಗಮಿಸಿದಾಗ ಗೋಶಾಲೆಯನ್ನು ಪ್ರಾರಂಭ ಮಾಡಬೇಕೆಂದು ಬಂದವರು ಅವರು ಮಠವನ್ನು ನಿರ್ಮಾಣ ಮಾಡಬೇಕೆಂದು ಬಂದವರಲ್ಲ. ಆದರೆ ಈಗ ಗುರು ವಾಕ್ಯದಿಂದ ಎಲ್ಲವು ನಡೆಯುತ್ತಿದೆ. ಎಂದರು.

ಗುರು ಸೇವೆಯನ್ನು ಮಾಡಿದವರಿಗೆ ಎಲ್ಲಾ ರೀತಿಯ ಸೌಲಭ್ಯಗಳು ದೊರಕಲು ಸಾಧ್ಯವಿದೆ, ಗುರುವಿನ ಗುಲಾಮನಾಗುದ ಹೊರೆತು ದೂರೆದಣ್ಣ ಮುಕುತಿ ಎನ್ನುವಂತೆ ಗುರು ಕಾರಣ್ಯದಿಂದ ಎಲ್ಲವನ್ನು ಪಡೆಯಬಹುದಾಗಿದೆ ಎಂದು ಶಿವಲಿಂಗಾನಂದ ಶ್ರೀಗಳು ತಿಳಿಸಿದರು.

ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಹುಬ್ಬಳ್ಳಿಯ ಶ್ರೀ ಸಿದ್ದಾರೂಢ ಮಠದ ಶ್ರೀ ಸಚ್ಚಿದಾನಂದ ಶ್ರೀಗಳು ತಮ್ಮ ಆರ್ಶಿವಚನದಲ್ಲಿ ಮಹಾತ್ಮರಿಂದ ಹಲವಾರು ಗುಣಗಳನ್ನು ಕಲಿಯಬೇಕಿದೆ. ಮಾನವನ ತಾಪವನ್ನು ಕಳೆಯುವ ಸಾಮಥ್ಯ ಇರುವುದು ಗುರುವಿಗೆ ಮಾತ್ರ, ಎಲ್ಲಿ ಪರಿಪೂರ್ಣವಾದ ವಿದ್ಯೆ ಇರುತ್ತದೆಯೂ ಅಲ್ಲಿ ಭಕ್ತಿ ಇರುತ್ತದೆ. ಜ್ಞಾನದ ಹಸಿವನ್ನು ನೀಗಿಸಲು ಗುರುವಿನ ಕಾರುಣ್ಯ ಬೇಕಿದೆ. ಸಿದ್ದರೂಢ ಮಠದಲ್ಲಿ ಯಾವಾಗ ಬೇಕಾದರೂ ಬಂದರೂ ಸಹಾ ಪ್ರಸಾದ ಸಿಗುತ್ತದೆ. ಅದಕ್ಕೆ ಲೋಪ ಇಲ್ಲ, ಮಾನವ ತನ್ನ ಮನಸ್ಸುನ್ನು ನಿಯಂತ್ರಣದಲ್ಲಿ ಇಡುವುದನ್ನು ಕಲಿಯಬೇಕಿದೆ ಮನಸ್ಸು ನಿಯಂತ್ರಣದಲ್ಲಿದ್ದರೆ ಏನು ಬೇಕಾದರೂ ಸಾದನೆ ಮಾಡಬಹುದಾಗಿದೆ. ಗುರುವಿನಲ್ಲಿ ಭಕ್ತನಾದವನು ನಿಷ್ಠೆ, ಭಕ್ತಿ, ಶ್ರದ್ದೆಯನ್ನು ಹೊಂದಿರಬೇಕಿದೆ. ಪ್ರೀತಿಯಿಂದ ಗುರುವನ್ನು ನೆನಯಬೇಕಿದೆ ಎಂದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಚಳ್ಳಕೆರೆ ನಗರಸಭೆಯ ಸದಸ್ಯರಾದ ಕೆ.ಸಿ.ನಾಗರಾಜ್ ಮಾತನಾಡಿ, ಭಕ್ತ ಕೆಟ್ಟ ಮಾರ್ಗದಲ್ಲಿ ಹೋಗುತ್ತಿದ್ದರೆ ಗುರುವಾದವನು ಅದನ್ನು ತಿದ್ದುವ ಕೆಲಸವನ್ನು ಮಾಡುತ್ತಾನೆ, ಅಂತಹ ಮಾಹಾನ್ ಶಕ್ತಿ ಅತನಿಗೆ ಇದೆ. ಮಾನವನ ಸಾಧನೆಗೆ ಮುಂದೆ ಗುರಿ ಇದ್ದು ಹಿಂದೆ ಗುರು ಇದ್ದಾಗ ಅದು ಪೂರ್ಣವಾಗುತ್ತದೆ. ಗುರುವಿನ ಸ್ಮರಣೆಯನ್ನು ಮಾಡುವುದು ಅಗತ್ಯವಾಗಿದೆ ಎಂದರು.

ನಗರಸಭೆಯ ಸದಸ್ಯರಾದ ವೆಂಕಟೇಶ್, ನಗರಾಭೀವೃದ್ದಿ ಪ್ರಾಧಿಕಾರದ ಮಾಜಿ ಸದಸ್ಯರಾದ ಶ್ರೀಮತಿ ಎ.ರೇಖಾ ಸಾಹಿತಿಗಳಾದ ಬಿ.ಆರ್.ಪುಟ್ಟಪ್ಪ ಹಾಗೂ ಮಾತೃಶ್ರೀ ವಿದ್ಯಾ ಸಂಸ್ಥೆಯ ಕಾರ್ಯದರ್ಶಿಗಳಾದ ವಿ.ಎಲ್.ಪ್ರಶಾಂತ್ ಮತ್ತು ಬುಡೇನ್‌ಸಾಬ್, ಗಣಪತಿ ಶಾಸ್ತ್ರಿ, ನಿರಂಜನ, ತಿಪ್ಪೇಸ್ವಾಮಿ, ಭಾಗವಹಿಸಿದ್ದರು. ಕಳೆದ ನ.30 ರಿಂದ ಡಿ.6ರವರೆಗೆ ಪ್ರತಿ ದಿನ ಸಂಜೆ ಆರೂಢ ಮೇರು ಜೀವನ ಚರಿತ್ರೆ ಪಾರಾಯಣ ಪ್ರವಚನ ನಡೆದಿದ್ದು, ಡಿ.6ರ ಬೆಳಿಗ್ಗೆ ಕಾರ್ತಿಕ ಬಹುಳ ನವಮಿಯಂದು ಬ್ರಾಹ್ಮಿ ಮಹೂರ್ತದಲ್ಲಿ ಶ್ರೀ ಕರ್ತೃ ಗದ್ದುಗೆಗೆ ರುದ್ರಾಭೀಷೇಕ ನಡೆಸಲಾಯಿತು.

# ಆರೋಗ್ಯ ಸದೃಢತೆಗೆ ಕ್ರೀಡೆಗಳು ಸಹಕಾರಿ

» ದಾವಣಗೆರೆ



ಗ್ರಾಮೀಣ ಕ್ರೀಡೆಗಳು ನಶಿಸುತ್ತಿರುವ ಇಂದಿನ ದಿನಗಳಲ್ಲಿ ಸರ್ಕಾರ ಜುಡೋ ಕ್ರೀಡೆಗೆ ಪ್ರೋತ್ಸಾಹ ನೀಡುತ್ತಿರುವುದು ಶ್ಲಾಘನೀಯ ಎಂದು ದಾವಣಗೆರೆ ಟೈಮ್ಸ್ ಕನ್ನಡ ದಿನ ಪತ್ರಿಕೆ ಸಂಪಾದಕ ಜೆ.ಎಸ್.ವೀರೇಶ್ ಹೇಳಿದರು.

ನಗರದ ಸರ್ಕಾರಿ ಪ್ರಥಮ ದರ್ಜೆ ಮತ್ತು ಸ್ನಾತಕೋತ್ತರ ಕೇಂದ್ರದಲ್ಲಿ ಗುರುವಾರ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ದಾವಣಗೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ದಾವಣಗೆರೆ ವಿಶ್ವವಿದ್ಯಾನಿಲಯ ಹಾಗೂ ದೈಹಿಕ ಶಿಕ್ಷಣ ನಿರ್ದೇಶಕರ ಸಂಘದ ಆಶ್ರಯದಲ್ಲಿ 2023-24ನೇ ಸಾಲಿನ ದಾವಣಗೆರೆ ವಿಶ್ವವಿದ್ಯಾನಿಲಯ ಮಟ್ಟದ ಅಂತರಕಾಲೇಜು, ಪುರುಷರ ಮತ್ತು ಮಹಿಳೆಯರ ಜುಡೋ ಸ್ಪರ್ಧೆ ಹಾಗೂ ದಾವಣಗೆರೆ ವಿಶ್ವವಿದ್ಯಾನಿಲಯ ಜುಡೋ ಪಟುಗಳ ಆಯ್ಕೆ ಪ್ರಕ್ರಿಯೆ ' ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು,ಯುವ ವಿದ್ಯಾರ್ಥಿಗಳು ತಮ್ಮ ದೇಹ ಸದೃಢಗೊಳಿಸಿಕೊಳ್ಳುವ ಜೊತೆಗೆ ಆತ್ಮಸ್ಥೈರ್ಯ ಹೆಚ್ಚಿಸಿಕೊಳ್ಳಲು ಕ್ರೀಡೆಗಳು ಸಹಕಾರಿಯಾಗಿವೆ.ಹಿಂದೆ ಕಬಡ್ಡಿ, ಖೋಖೋ, ವಾಲಿವಾಲ್, ಫುಟ್ಬಾಲ್ ಸೇರಿದಂತೆ ಗ್ರಾಮೀಣ ಕ್ರೀಡೆಗಳ ಮೂಲಕ ಕ್ರೀಡಾಪಟುಗಳು ರಾಜ್ಯ, ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಪದಕಗಳನ್ನು ಪಡೆದು ದೇಶ ಮತ್ತು ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ. ಅದೇ ರೀತಿ ನೀವು ಕೂಡ ರಾಜ್ಯ, ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದ ಜುಡೋ ಸ್ಪರ್ಧೆಯಲ್ಲಿ ಭಾಗವಹಿಸಿ ಪದಕಗಳನ್ನು ಪಡೆಯುವ ಮೂಲಕ ಜಿಲ್ಲೆಗೆ ಮತ್ತು ಕಾಲೇಜಿಗೆ ಕೀರ್ತಿ ತರಬೇಕೆಂದು ಸಲಹೆ ನೀಡಿದರು.

ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳು ಮೊಬೈಲ್ ಮತ್ತು ದುಶ್ಚಟಗಳ ದಾಸರಾಗಿ ತಮ್ಮ ಬದುಕನ್ನೇ ನಾಶ ಮಾಡಿಕೊಳ್ಳುತ್ತಿದ್ದಾರೆ. ಯುವಕರು ಇಂತಹ ಕ್ರೀಡೆಗಳಲ್ಲಿ ಭಾಗವಹಿಸುವ ಜೊತಗೆ ಸದೃಢ ಆರೋಗ್ಯ ಕಾಪಾಡಿಕೊಂಡು, ಉನ್ನತ ಹುದ್ದೆಯನ್ನು ಪಡೆದು ತಂದೆ, ತಾಯಿಗಳನ್ನು ನೋಡಿಕೊಳ್ಳಬೇಕೆಂದು ಕಿವಿಮಾತು ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಭಾರಿ ಪ್ರಾಂಶುಪಾಲ ಕೊಟ್ರಪ್ಪ, ಜುಡೋ ಕ್ರೀಡೆ ಜಪಾನ್ ಮೂಲದ ಕ್ರೀಡೆಯಾಗಿದೆ. ಈ ಕ್ರೀಡೆಯಿಂದ ವಿದ್ಯಾರ್ಥಿಗಳ ದೇಹ ಬಲಿಷ್ಠಗೊಳ್ಳುವ ಜೊತೆಗೆ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು. ಹೀಗಾಗಿ ಜುಡೋ ಕ್ರೀಡೆಯಲ್ಲಿ ಹೆಚ್ಚು ಹೆಚ್ಚು ಭಾಗವಹಿಸಬೇಕೆಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ದಾವಣಗೆರೆ ವಿಶ್ವವಿದ್ಯಾನಿಲಯ ದೈಹಿಕ ಶಿಕ್ಷಣ ವಿಭಾಗದ ಪ್ರಭಾರಿ ನಿರ್ದೇಶಕರಾದ ಪ್ರೊ. ವೆಂಕಟೇಶ್, ಕ್ರೀಡಾಧಿಕಾರಿ ಡಾ. ಬಿ.ಎಚ್.ವೀರಪ್ಪ, ದಾವಣಗೆರೆ ವಿಶ್ವವಿದ್ಯಾನಿಲಯ, ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಬಸವರಾಜ ತಹಸೀಲ್ದಾರ್, ಸಂಯುಕ್ತ ಕರ್ನಾಟಕ ಉಪಸಂಪಾದ ಎ.ಎನ್.ನಿಂಗಪ್ಪ, ಸಹಾಯಕ ಪ್ರಾಧ್ಯಾಪಕ ಪ್ರೊ. ಎಸ್.ವೆಂಕಟೇಶ್ ಬಾಬು, ವಾಣಿಜ್ಯಶಾಸ್ತ್ರ, ಸಹಾಯಕ ಪ್ರಾಧ್ಯಾಪಕ ಪ್ರೊ. ಶಂಭುಲಿಂಗಪ್ಪ ನಲ್ಲನವರ್, ಪರಿಸರವಿಜ್ಞಾನ, ಆಂಗ್ಲಭಾಷಾ ಸಹಾಯಕ ಪ್ರಾಧ್ಯಾಪಕ ಪ್ರೊ. ಮಂಜುನಾಥ.ಜಿ ಪ್ರೊ. ಕೊಟ್ರಪ್ಪ, ಸೇರಿದಂತೆ ಇನ್ನಿತರರಿದ್ದರು.

# ಎಸ್.ನಿಜಲಿಂಗಪ್ಪರವರ 121ನೇ ಜನ್ಮದಿನಾಚರಣೆ

» ಚಿತ್ರದುರ್ಗ



ಎಸ್.ನಿಜಲಿಂಗಪ್ಪ ಮೆಮೋರಿಯಲ್ ಟ್ರಸ್ಟ್ (ರಿ), ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರನಾಯಕ ಎಸ್.ನಿಜಲಿಂಗಪ್ಪರವರ 121ನೇ ಜನ್ಮದಿನಾಚರಣೆ ಮತ್ತು ಜಿಲ್ಲೆಯ ನೂತನ ಶಾಸಕರುಗಳಿಗೆ ಅಭಿನಂದನಾ ಸಮಾರಂಭವೂ ಡಿ.10ರ ಬೆಳ್ಳಿಗೆ 11ಕ್ಕೆ ಸಿಬಾರದ ಎಸ್.ಎನ್.ಸ್ಮಾರಕದ ಪುಣ್ಯಭೂಮಿಯಲ್ಲಿ ನಡೆಯಲಿದೆ ಎಂದು ಟ್ರಸ್ಟ್‌ನ ಗೌರವ ಕಾರ್ಯದರ್ಶಿಗಳಾದ ಹೆಚ್.ಹನುಮಂತಪ್ಪ ತಿಳಿಸಿದ್ದಾರೆ. ಕಾರ್ಯಕ್ರಮದ ಸಾನಿಧ್ಯವನ್ನು ಶ್ರೀ ಮಾದಾರ ಚನ್ನಯ್ಯ ಗುರುಪೀಠದ ಪೀಠಾಧ್ಯಕ್ಷರಾದ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಶ್ರೀಗಳು ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಎಸ್.ಎನ್.ಟ್ರಸ್ಟ್‌ನ ಅಧ್ಯಕ್ಷರು, ಮಾಜಿ ಸಚಿವರು ಹಾಲಿ ಶಾಸಕರಾದ ಶಾಮನೂರು ಶಿವಶಂಕರಪ್ಪ ವಹಿಸಲಿದ್ದಾರೆ. ಎಸ್.ಎನ್.ಟ್ರಸ್ಟ್‌ನ ಉಪಾಧ್ಯಕ್ಷರಾದ ಪ್ರೋ.ಎಸ್.ಎನ್.ಕಿರಣ್ ಶಂಕರ್ ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ಉದ್ಘಾಟನೆಯನ್ನು ಯೋಜನಾ ಮತ್ತು ಸಾಂಖ್ಯಿಕ ಸಚಿವರಾದ ಡಿ.ಸುಧಾಕರ್ ನೇರವೇರಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಜಿಲ್ಲೆಯ ಶಾಸಕರುಗಳಾದ ಕೆ.ಸಿ.ವೀರೇಂದ್ರ, ಬಿ.ಜಿ.ಗೋವಿಂದಪ್ಪ, ಎನ್.ವೈ ಗೋಪಾಲಕೃಷ್ಣ, ಎಂ.ಚಂದ್ರಪ್ಪ, ಟಿ.ರಘುಮೂರ್ತಿ ಹಾಗೂ ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್‌ರವರನ್ನು ಅಭಿನಂದಿಸಲಾಗುವುದು ಎಂದು ಎಸ್.ಷಣ್ಮುಖಪ್ಪ ಮತ್ತು ತಾಜ್‌ಪೀರ್ ತಿಳಿಸಿದ್ದಾರೆ.

### ಅರಸು ನಿಗಮದ ಸೌಲಭ್ಯಕ್ಕೆ ಡಿ.15 ರಂದು ಆಯ್ಕೆ ಸಮಿತಿ ಸಭೆ

» ದಾವಣಗೆರೆ

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಹಾಗೂ ಇದರ ವ್ಯಾಪ್ತಿಯಲ್ಲಿ ಬರುವ ವಿವಿಧ ನಿಗಮಗಳಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಸಾಲ, ಸೌಲಭ್ಯ ಯೋಜನೆಗಳಿಗೆ ಸಂಬಂಧಿಸಿದಂತೆ ಡಿ.15 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ ಇಟ್ನಾಳ್ ಇವರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ. ಅರ್ಜಿದಾರರು ಕಡ್ಡಾಯವಾಗಿ ತಾವುಗಳು ಸಾಲ, ಸೌಲಭ್ಯ ಕೋರಿ ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯೊಂದಿಗೆ ಹಾಗೂ ಗುರುತಿನ ಚೀಟಿಯೊಂದಿಗೆ ಹಾಜರಾಗಬೇಕು ಎಂದು ನಿಗಮದ ವ್ಯವಸ್ಥಾಪಕ ಸಾತ್ವಿಕ್ ತಿಳಿಸಿದ್ದಾರೆ.

### ಡಿ.11ಕ್ಕೆ ಬೆಂಗಳೂರಿನಲ್ಲಿ ರೈತರ ಮಹಾ ಅಧಿವೇಶನ

ದಾವಣಗೆರೆ: ಸಂಯುಕ್ತ ಕಿಸಾನ್ ಮೋರ್ಚಾ (ರಾಜಕೀಯೇತರ), ರಾಜ್ಯ ರೈತ ಸಂಘಟನೆಗಳ ಒಕ್ಕೂಟ,ರಾಜ್ಯ ಕಬ್ಬು ಬೆಳೆಗಾರರ ಸಂಘ ಕರ್ನಾಟಕ ವತಿಯಿಂದ ವಿಶ್ವರೈತ ದಿನವಾದ ಡಿಸೆಂಬರ್ 23ರಂದು ಬೆಳಿಗ್ಗೆ 11ಕ್ಕೆ ರೈತರ ಮಹಾ ಅಧಿವೇಶನವನ್ನು ಬೆಂಗಳೂರಿನಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ರಾಜ್ಯ ರೈತ ಸಂಘಟನೆಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್ ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೃಷಿ ಉತ್ಪನ್ನಗಳಿಗೆ ಕನಿಷ್ಠ ಬೆಂಬಲ ಬೆಲೆ ಖಾತರಿ ಕಾನೂನು, ರೈತರ ಸಾಲ ಮನ್ನಾ ಸೇರಿದಂತೆ ವಿವಿಧ ಬೇಡಿಕೆಗಳನ್ನು ಒತ್ತಾಯಿಸಲು ಹಾಗೂ ರಾಷ್ಟ್ರೀಯ ರೈತ ಮುಖಂಡರ ಸಮ್ಮುಖದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಗೆ ಗಂಭೀರ ಎಚ್ಚರಿಕೆ ನೀಡಲಾಗುವುದು ಎಂದರು.

## ಪ್ರಮುಖ ಸುದ್ದಿ

# ಅಂಬೇಡ್ಕರ್ ಒಬ್ಬ ಶ್ರೇಷ್ಠ ಜ್ಞಾನಿ, ಭೋದಕ, ವಿಚಾರವಾದಿ

» ಹೊಸದುರ್ಗ



ಅಂಬೇಡ್ಕರ್ ಹುಟ್ಟದಿದ್ದರೆ ಭಾರತಕ್ಕೆ ಭವಿಷ್ಯವೇ ಇರುತ್ತಿರಲಿಲ್ಲ, ಈ ದೇಶದ ಸಾಮಾನ್ಯ ಪ್ರಜೆಯು ಎಲ್ಲಾ ಹುದ್ದೆಯನ್ನು ಅಲಂಕರಿಸಲು ಬಾಬಾ ಸಾಹೇಬರು ಕಾರಣ, ಅಂಬೇಡ್ಕರ್ ಒಬ್ಬ ಬೋಧಕರಾಗಿ,ಭಾಷಣಕಾರರಾಗಿ, ವಿಚಾರವಾದಿಗಳಾಗಿ, ಜಗತ್ತಿನ ಅತ್ಯಂತ ಶ್ರೇಷ್ಠ ಜ್ಞಾನಿಯಾಗಿ ಹೊರಹಮ್ಮಿದ್ದಾರೆ. ಎಂದು ಮುಖಂಡ ಬಿಜಿ ಅರುಣ್ ತಿಳಿಸಿದರು,

ಹೊಸದುರ್ಗ ಅಂಬೇಡ್ಕರ್ ಅಭಿಮಾನಿ ವೇದಿಕೆಯಿಂದ ನಡೆದ ಅಂಬೇಡ್ಕರ್ ಜ್ಯೋತಿ ಜಾತಕ ಕಾರ್ಯಕ್ರಮವನ್ನ ಉದ್ಘಾಟಿಸಿ ಮಾತನಾಡಿದ ಅವರು ಅಂಬೇಡ್ಕರ್ ರವರ ಇಷ್ಟೆಲ್ಲ ಸಾಧನೆಗೆ ಪ್ರಮುಖ ಕಾರಣ ಅವರ ಬಡತನ, ಅಸ್ಪೃಶ್ಯವೆಂಬ ಕಾರಣಕ್ಕೆ ಅವರ ಮೇಲೆ ನಿರಂತರವಾಗಿ ನಡೆದ ದಬ್ಬಾಳಿಕೆ, ಇದರ ಬಾಳಿಕೆಗೆ ಜಗ್ಗದೆ ಅವರ ಪರಿಶ್ರಮ ಅವರೊಬ್ಬ ಸಂವಿಧಾನ ಶಿಲ್ಪಿಯಾಗಲು ಕಾರಣವಾಯಿತು. ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು ಅಂಬೇಡ್ಕರ್ ಅವರ ಜೀವನದ ಯಶೋಗಾಥೆಯನ್ನು ಪಠ್ಯಪುಸ್ತಕಗಳಲ್ಲಿ ತಿಳಿದುಕೊಂಡು ಮಾದರಿ ವ್ಯಕ್ತಿಗಳಾಗಿ , ಆಗ ಮಾತ್ರ ಸಮ ಸಮಾಜವನ್ನು ನಿರ್ಮಾಣ ಮಾಡಲು ಸಾಧ್ಯ ಎಂದರು ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಸದ್ಗುರು ಸಂಸ್ಥೆಯ ಮುಖ್ಯಸ್ಥ ಯುವ ಉದ್ಯಮಿ ಡಿಎಸ್ ಪ್ರದೀಪ್ ಮಾತನಾಡಿ ಅಂಬೇಡ್ಕರ್ ಅವರು ಸ್ಥಾಪಿಸಿದ ಮೂಕ ನಾಯಕ ಪತ್ರಿಕೆ ಈ ದೇಶದಲ್ಲಿ ಶಿಕ್ಷಣ ಹಾಗೂ ಸಾಮಾಜಿಕ ಸ್ಥಾನಮಾನಗಳಿಂದ ವಂಚಿತರಾದ ದಮನಿತ ದಲಿತ ಬಂಧುಗಳಿಗೆ ಗೌರವವನ್ನು ಸಂಪಾದಿಸಿಕೊಡುವುದೇ ಅಂಬೇಡ್ಕರ್ ಸಂಕಲ್ಪವಾಗಿತ್ತು.ಮೂಕನಾಯಕ ಪತ್ರಿಕೆ ಅಂತಹ ಬಾಬಾ ಸಾಹೇಬ್ ಅಂಬೇಡ್ಕರ್ ರವರ ಸಂಕಲ್ಪದ ಆರಂಭಿಕ ಪ್ರಯತ್ನ ಎನ್ನಬಹುದು. ಬಾಬಾ ಸಾಹೇಬರ ಈ ಸಂಕಲ್ಪವೇ ಮುಂದೆ ಅಸ್ಪೃಶ್ಯರ ಐತಿಹಾಸಿಕ ಸಮಾವೇಶಕ್ಕೆ ನಾಂದಿ ಹಾಡಿತು. ರಾಷ್ಟ್ರ ಪಾರತಂತ್ರ್ಯದ ಸಂಕೋಲೆಯಿಂದ ಬಿಡಿಸಿಕೊಳ್ಳುವ ಹೋರಾಟದ ತೀವ್ರತೆಯ ಎದುರು 'ಬ್ರಿಟಿಷರಿಂದ ಬಿಡುಗಡೆಗೊಂಡ ಸ್ವತಂತ್ರ ಭಾರತದಲ್ಲಿ ಅಸ್ಪೃಶ್ಯರ ಸ್ಥಾನಮಾನವೇನು?' ಎಂದು ನಿರ್ಭಿಡೆಯಿಂದ ಕೇಳುವ ಧ್ವನಿಯಾಗಿ ಈ ಪತ್ರಿಕೆ ಬೆಳೆದು ಹೆಮ್ಮರವಾಯಿತು.

ದಲಿತ ಮುಖಂಡ ಗೂಳಿಹಟ್ಟಿ ಕೃಷ್ಣಮೂರ್ತಿ ಮಾತನಾಡಿ ಅಂಬೇಡ್ಕರ್ ಅವರು ತಮ್ಮ ನಿಜ ಬದುಕಿನಲ್ಲಿ ತಮಗಾದ ನೋವನ್ನ ದಕ್ಕಿಸಿಕೊಂಡು ಶೋಷಿತರಾದಮನಿತರ ತಮ್ಮ ಹಕ್ಕುಗಳ ಈಡೇರಿಕೆಗಾಗಿ ತಮ್ಮನ್ನೇ ಅರ್ಪಿಸಿಕೊಂಡು ಭಾರತದ ಇತಿಹಾಸದಲ್ಲಿ ಅಜರಮರರಾಗಿದ್ದಾರೆ.

ಶಿಕ್ಷಣ ಒಂದೇ ನಿಮ್ನ ವರ್ಗಗಳ ಏಳಿಗೆಗೆ ಪ್ರಮುಖವಾಗುವುದು ಎಂದರು,

ನಗರದ ವೀರಭದ್ರ ಸ್ವಾಮಿ ದೇವಸ್ಥಾನದಿಂದ ಅಂಬೇಡ್ಕರ್ ವೃತ್ತದ ವರೆಗೆ ಕುದುರೆಯೊಂದಿಗೆ ಅಂಬೇಡ್ಕರ್ ಜ್ಯೋತಿ ಸಾಗಿದ್ದು ವಿಶೇಷವಾಗಿತ್ತು, ನೂರಾರು ವಿದ್ಯಾರ್ಥಿಗಳು ಜಾತವನ್ನ ಯಶಸ್ವಿಗೊಳಿಸಿದರು,

ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಅಭಿಮಾನಿ ವೇದಿಕೆಯ ಸಂಚಾಲಕ ಸಮಾಜ ಸೇವಕ ತುಂಬಿನಕೆರೆ ಬಸವರಾಜ್, ಮುಖಂಡಆರ್ ಡಿ ಸೀತಾರಾಮ್, ಉಮೇಶ್ ಗುಜ್ಜಾರ್, ಪುರಸಭಾ ಸದಸ್ಯ ದೊಡ್ಡಯ್ಯ, ನಾಗರಾಜ್,, ರವಿಕುಮಾರ್, ಮೂಡಲಗಿರಿಯಪ್ಪ, ಅಣ್ಣೇಶ್,ಲಕ್ಕಿಗುರು, ಮಾಜಿ ಗ್ರಾ ಪಂ ಸದಸ್ಯ ಮಾರುತಿ, ಹಾಗೂ ನೂರಾರು ವಿದ್ಯಾರ್ಥಿಗಳು ಅಂಬೇಡ್ಕರ್ ಅಭಿಮಾನಿ ಬಳಗದವರು ಪಾಲ್ಗೊಂಡಿದ್ದರು.

# ನಗರದಲ್ಲಿ ಭೀಮ ಜ್ಞಾನ ಜ್ಯೋತಿ ನಮನ

» ಚಿತ್ರದುರ್ಗ

ಸರ್ಕಾರ ಪ್ರತಿಯೊಂದು ಸೌಕರ್ಯ, ಸೌಲಭ್ಯವನ್ನು ಸದುಪಯೋಗ ಪಡಿಸಿಕೊಂಡು ಎಲ್ಲರು ಸಹಾ ಅಂಬೇಡ್ಕರ್ ರವರಂತೆ ಅದರ್ಶ ವ್ಯಕ್ತಿಗಳಾಗಬೇಕಿದೆ. ಸಮಾಜದಲ್ಲಿ ತಲೆಯನ್ನು ಎತ್ತಿ ಬದುಕುವಂತಾಗಬೇಕಿದೆ ಆಗ ಮಾತ್ರ ಅಂಬೇಡ್ಕರ್ ರವರ ಆಶಯಗಳು ಈಡೇರಿದಂತೆ ಆಗುತ್ತದೆ ಎಂದು ಮಾಜಿ ಸಚಿವ ಹೆಚ್.ಆಂಜನೇಯ ತಿಳಿಸಿದರು.

ಭೀಮಯಾತ್ರೆ ಬಳಗದವತಿಯಿಂದ ಭಾರತರತ್ನಡಾ.ಬಿ.ಆರ್‌ಅಂಬೇಡ್ಕರ್‌ರವರ ಪರಿನಿರ್ವಾಣ ದಿನದ ಅಂಗವಾಗಿ ನಿನ್ನೆ ಸಂಜೆ ನಗರದ ಡಾ.ಬಿ.ಆರ್ ಅಂಬೇಡ್ಕರ್ ಪ್ರತಿಮೆ ಬಳಿ ಹಮ್ಮಿಕೊಂಡಿದ್ದ ಭೀಮ ಜ್ಞಾನ ಜ್ಯೋತಿ ನಮನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.



ಬಾಬಾ ಸಾಹೇಬ ಅಂಬೇಡ್ಕರ್ ರವರು ವಿಶ್ವ ಮೆಚ್ಚಿದ ಶ್ರೇಷ್ಠ ಜ್ಞಾನಿಯಾಗಿದ್ದಾರೆ. ವಿಶ್ವ ರತ್ನರಾಗಿದ್ದರು ಅವರಷ್ಟು ಓದಿದ ವ್ಯಕ್ತಿ ಆಗಿನ ಕಾಲದಲ್ಲಿ ಬೆರಳೆಣಿಕೆಯಷ್ಟು ಮಾತ್ರ ಇದ್ದರು ಅದರಲ್ಲಿ ಇವರು ಒಬ್ಬರು. ದೊಡ್ಡ ವಿದ್ವಂತ್‌ನ್ನು ಹೊಂದಿದ್ದರು. ರಾಜಕೀಯ, ಕಾನೂನು, ಅರ್ಥಿಕ ತಜ್ಞರಾಗಿದ್ದ ಅಂಬೇಡ್ಕರ್ ರವರಿಗೆ ನೆಹರು ಮತ್ತು ಗಾಂಧೀಜಿಯವರು ಅವಕಾಶವನ್ನು ನೀಡುವುದರ ಮೂಲಕ ಸಮಾಜ ಸೇವೆಗೆ ಕಾರಣರಾದರು.

ದೇಶದ ಸಂವಿಧಾನವನ್ನು ಇವರೇ ಬರೆಯಬೇಕೆಂದು ಇವರನ್ನು ಆಯ್ಕೆ ಮಾಡಲಾಯಿತು. ಮತ್ತೂ ಅವರಿಂದಲೇ ಬರೆಸಲಾಯಿತು. ಅವರನ್ನು ಕಾನೂನು ಮಂತ್ರಿಯನ್ನಾಗಿ ಮಾಡಿ ಅವಕಾಶವನ್ನು ನೀಡಲಾಯಿತು. ಅಂಬೇಡ್ಕರ್ ರವರು ಬೇರೆ ದೇಶದ ಸಂವಿಧಾನವನ್ನು ಓದುವುದರ ಮೂಲಕ ನಮ್ಮ ದೇಶದಲ್ಲಿದ್ದ ಬಡತನ ಮತ್ತು ಅಸ್ಪೃಶ್ಯತೆ ಬೇದ-ಬಾವ ಮೇಲು-ಕೀಳು ಸಮಾನತೆ ಇಲ್ಲದೆ ದೇಶವಾಗಿತ್ತು ಇದರ ಅನುಗುಣವಾಗಿ ಸಂವಿಧಾನವನ್ನು ಬರೆದಿದ್ದಾರೆ ಎಂದರು.

ಎಲ್ಲರು ಸಮಾನಾಗಿ ಬಾಳ ಬೇಕು ಎಂದಿದ್ದರು ಸಂಪತ್ತು ಕೆಲವರ ಕೈಯಲ್ಲಿತು. ಸಂಪತ್ತು ಸಮಾನವಾಗಿ ಎಲ್ಲರಿಗೂ ಸಹಾ ಹಂಚಿಕೆಯಾಗಬೇಕು ಎಲ್ಲರು ಸಹಾ ಬದುಕಬೇಕು, ಸಂವಿಧಾನದಲ್ಲಿ ಸ್ವಾತಂತ್ರ್ಯ ಅಭೀವ್ಯಕ್ತಿ ಸ್ವಾತಂತ್ರ್ಯ ಅರ್ಥಿಕ ಸ್ವಾತಂತ್ರ್ಯ, ಸಮಾನತೆ ಎಲ್ಲಾ ರೀತಿಯ ಅವಕಾಶಗಳನ್ನು ದೂರದೃಷ್ಟಿಯಿಂದ ಅಂಬೇಡ್ಕರ್‌ರವರು ಕಲ್ಪಿಸಿಕೊಟ್ಟಿದ್ದಾರೆ.

ಅವರು ಸಂವಿಧಾನದಲ್ಲಿ ಅವಕಾಶಗಳನ್ನು ನೀಡಿದ್ದರಿಂದ ಇಂದು ನಾವುಗಳು ಇಂದು ಇಲ್ಲಿ ನಿಂತು ಮಾತನಾಡಲು ಸಾಧ್ಯವಾಗಿದೆ. ಇದು ಸಂವಿಧಾನದ ಪ್ರತಿಫಲವಾಗಿದೆ ಎಂದು ಅಂಜನೇಯ ತಿಳಿಸಿದರು. ಮಹಿಳೆಯರಿಗೆ ಆಸ್ತಿ ಹಕ್ಕನ್ನು ನೀಡಬಾರದೆಂದು ಪಟ್ಟಭದ್ರಾ ಹಿತಾಸಕ್ತಿಗಳು ಸಂಚನ್ನು ಹೊಡಿದ್ದರು ಈ ಸಮಯದಲ್ಲಿ ಅಂಬೇಡ್ಕರ್‌ರವರು ಹೆಣ್ಣು ಮಕ್ಕಳಿಗೆ ಆಸ್ತಿಯ ಹಕ್ಕು ಮಸೂದೆಯನ್ನು ಪಾರ್ಲಿಮೆಂಟ್‌ನಲ್ಲಿ ಮಂಡಿಸಿದರು ಆದರೆ ಅದು ಪಾಸಾಗಲಿಲ್ಲ ಇದರಿಂದ ಅವರು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆಯನ್ನು ನೀಡುವುದರ ಮೂಲಕ ಸಚಿವ ಸಂಪುಟದಿಂದ ಹೊರಬಂದರು. ದೇಶದಲ್ಲಿ ವಿವಿಧ ರೀತಿಯ ಕೆಟ್ಟ ಪದ್ದತಿಗಳಿದ್ದವು ಸತಿಸಹಗಮನ, ಮನುಷ್ಯರಂತೆ ಬಾಳ ಬೇಕಾದ ಮಾನವನರನ್ನು ಆಸ್ಪೃಶ್ಯತೆ ಕಾಣುತಿತ್ತು. ಅಂಬೇಡ್ಕರ್‌ರವರ ಸಂವಿಧಾನದಿಂದ ಇಂದು ನಾವುಗಳು ಯೋಗ್ಯವಾದ ಸ್ಥಾನದಲ್ಲಿದ್ದೆವೆ. ರಾಜಕಾರಣಿಗಳು ಸಮಾನತೆ ಅವಕಾಶವನ್ನು ಕಲ್ಪಿಸಿದ್ದಾರೆ ಎಂದು ನುಡಿದರು. ಮಾಜಿ ಶಾಸಕರಾದ ಜಿ.ಎಚ್. ತಿಪ್ಪಾರೆಡ್ಡಿ ಮಾತನಾಡಿ, ಅಂಬೇಡ್ಕರ್‌ರವರ ಸಿದ್ದಾಂತದ ಪ್ರಕಾರ ಶಿಕ್ಷಣವನ್ನು ಕಲಿತು ಹೋರಾಟವನ್ನು ಮಾಡಬೇಕಿದೆ ಎಂದರು. ಜಿಲ್ಲಾಧಿಕಾರಿಗಳಾದ ಶ್ರೀಮತಿ ದಿವ್ಯಪ್ರಭು ಮಾತನಾಡಿದರು.

ಕಾರ್ಯಕ್ರಮದಲ್ಲಿ ನೆರದಿದ್ದ ನೂರಾರು ವಿದ್ಯಾರ್ಥಿಗಳು ಕೈಯಲ್ಲಿ ಹಣತೆಯನ್ನು ಹಿಡಿದು ಅಂಬೇಡ್ಕರ್ ರವರಿಗೆ ಜಯಕಾರ ಹಾಕುತ್ತಾ, ಅವರ ಪ್ರತಿಮೆಯಿಂದ ಸಂತೇಪೇಟೆ ವೃತ್ತ ತದ ನಂತರ ಮರಳಿ ಅಂಬೇಡ್ಕರ್ ಪ್ರತಿಮೆಯವರೆಗೂ ಮೆರವಣಿಗೆಯನ್ನು ನಡೆಸಲಾಯಿತು. ಇದೇ ಸಂದರ್ಭದಲ್ಲಿ ಅಂಬೇಡ್ಕರ್ ಬಾವ ಚಿತ್ರವನ್ನು ಬೆಳ್ಳಿ ರಥದಲ್ಲಿ ಕಳ್ಳರಿಸಿ ಅದಕ್ಕೆ ಅಲಂಕಾರವನ್ನು ಮಾಡುವುದರ ಮೂಲಕ ಮೆರವಣಿಯನ್ನು ನಡೆಸಲಾಯಿತು.

ಕಾರ್ಯಕ್ರಮದಲ್ಲಿ ತಹಶೀಲ್ದಾರ್ ನಾಗವೇಣಿ, ಪೌರಾಯುಕ್ತರಾದ ರೇಣುಕಾ, ವಕೀಲರಾದ ಶರಣಪ್ಪ, ಈ.ಎಸ್.ರವಿಕುಮಾರ್, ಮುಖಂಡರಾದ ಡಿ.ಕುಮಾರಸ್ವಾಮಿ, ಟಿ.ಸತೀಶ್, ಆರ್.ಪ್ರಕಾಶ್, ಎಸ್.ಮಂಜಣ್ಣ, ಜೆ.ಜೆ.ಹಟ್ಟಿ ರಘು, ಕೃಷ್ಣಮೂರ್ತಿ ಹೆಚ್.ನಟರಾಜ್ ಭಾಗವಹಿಸಿದ್ದರು.

# ಅನೀಮಿಯಾ ಕುರಿತು ಅರಿವು ಮತ್ತು ಚಿಕಿತ್ಸೆ ಕಾಯಕ್ರಮ

» ದಾವಣಗೆರೆ

ನಗರದ ಕಸ್ತೂರಬಾ ಪದವಿ ಪೂರ್ವ ಕಾಲೇಜಿನ್ನಲ್ಲಿಂದು ಎನ್ ಎಸ್ ಎಸ್ ಘಟಕ ಮತ್ತು ತಾಲ್ಲೂಕು ಆರೋಗ್ಯ ಕೇಂದ್ರ ದಾವಣಗೆರೆ, ಇವರ ಸಂಯುಕ್ತಾಶ್ರಯದಲ್ಲಿ "ಅನೀಮಿಯಾ ಕುರಿತು ಅರಿವು ಮತ್ತು ಚಿಕಿತ್ಸೆ " ಕಾರ್ಯಕ್ರಮ ಆಯೋಜಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ವೈದ್ಯಾಧಿಕಾರಿ ಶ್ರೀಮತಿ ಹರುಣಾಕ್ಷಿ ಶೆಟ್ಟಿಯವರು ಇಂದು ಅಧಿಕ ಸಂಖ್ಯೆಯಲ್ಲಿ ಶಾಲಾಮಕ್ಕಳು ರಕ್ತಹೀನತೆ ಒಳಗಾಗಿ ಅವರಲ್ಲಿ ರೋಗ ನಿರೋಧಕ ಶಕ್ತಿ ಕಡಿಮೆಯಾಗುತ್ತಿದೆ ಅಲ್ಲದೇ ಅವರು ಶಕ್ತಿಹೀನವಾಗುತ್ತಿರುವುದು ಅತ್ಯಂತ ಕಳವಳಕಾರಿ ಸಂಗತಿಯಾಗಿದೆ. ಅವರು ದಿನ ನಿತ್ಯ ಬಳಸುವ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ವಸ್ತುಗಳ ಸೇವನೆಯೇ ಕಾರಣವಾಗಿದೆ. ಹಣ್ಣು ಮತ್ತು ತರಕಾರಿಗಳನ್ನು ಪ್ರತಿ ದಿನ ಬಳಸುವುದರಿಂದ ದೇಹದಲ್ಲಿ ಪೌಷ್ಟಿಕತೆ ಹೆಚ್ಚುತ್ತದೆ, ಇದರಿಂದ ರಕ್ತ ಹೀನತೆ ಖಾಯಿಲೆಯಿಂದ ಮುಕ್ತಿ ಪಡೆಯಬಹುದು, ಎಂದು ಹೇಳಿದರು.



ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಬಿ.ಕೆ. ಮಾಗನೂರ ರವರು ಇಂತಹ ಕಾರ್ಯಕ್ರಮಗಳು ಕಾಲೇಜಿನಲ್ಲಿನಡೆಯುವುದರಿಂದವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡುತ್ತದೆ, ಆದುದರಿಂದ ನಮ್ಮ ಎನ್ ಎಸ್ ಎಸ್ ಘಟಕಕ್ಕೆ ವಂದನೆಗಳನ್ನು ಸಲ್ಲಿಸುತ್ತೇನೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ಕಾಲೇಜಿನ ಎಲ್ಲಾ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಒಳಪಡಿಸಿ, ರಕ್ತ ಹೀನತೆಗೆ ಒಳಗಾಗಿರುವ ವಿದ್ಯಾರ್ಥಿಗಳಿಗೆ ಚಿಕಿತ್ಸೆ ನೀಡಲಾಯಿತು.ಕಾರ್ಯಕ್ರಮದಲ್ಲಿ ಡಾ. ರೇಣುಕಾ, ಕಾರ್ತಿಕ್, ಉಪನ್ಯಾಸಕರಾದ ಶ್ರೀ ವೀರಪ್ಪ , ಶ್ರೀ ನವೀನ್ ಪಾಟೀಲ್, ಭರಮಗೌಡ ಮೊದಲಾದವರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಎನ್ ಎಸ್ ಎಸ್ ಕಾರ್ಯಕ್ರಮ ಅಧಿಕಾರಿಗಳಾದ ಎಸ್ ಜಿ ನಾಗರಾಜ್ ರವರು ಪ್ರಾಸ್ತಾವಿಕ ನುಡಿಗಳನ್ನಾಡಿದರು.



**ಚಳ್ಳಕೆರೆ ತಾಲ್ಲೂಕಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಗ್ರಾಮ ಪಂಚಾಯಿತಿ ಮಟ್ಟದ ಶಾಲೆಗಳ ಗಣಿತ ಕಲಿಕಾ ಆಂದೋಲನ ಕಾರ್ಯಕ್ರಮ2023-24ನ್ನು ರೇಣುಕಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷ ಜಾನಜ್ಜ ಉದ್ಘಾಟಿಸಿದರು.**

# ಜಿಲ್ಲಾ ತಂಬಾಕು ನಿಯಂತ್ರಣ ಕೋಶದಿಂದ ಕಾರ್ಯಾಚರಣೆ



» ದಾವಣಗೆರೆ

ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ತಂಬಾಕು ನಿಯಂತ್ರಣ ಕಾಯ್ದೆಯಡಿ ಪರವಾನಗಿ ಪಡೆಯದೇ ತಂಬಾಕು ಉತ್ಪನ್ನ ಮಾರಾಟ ಮಾಡುತ್ತಿರುವ ಅಂಗಡಿಗಳ ಮೇಲೆ ದಾಳಿ ನಡೆಸಿ ಪ್ರಕರಣ ದಾಖಲಿಸಲಾಯಿತು.

ಗುರುವಾರ ಮಹಾನಗರ ಪಾಲಿಕೆಯ ತಂಬಾಕು ಮಾರಾಟಗಾರರಿಗೆ ಪ್ರತ್ಯೇಕ ಪರವಾನಗಿಯನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಮಾಡುವ ನಿಟ್ಟಿನಲ್ಲಿ ವಲಯ 1 ರ ವ್ಯಾಪ್ತಿಯಲ್ಲಿ ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣ ಕೋಶ ಜಂಟಿ ಕಾರ್ಯಾಚರಣೆ ಕೈಗೊಳ್ಳಲಾಯಿತು. ಮಹಾನಗರ ಪಾಲಿಕೆ ವ್ಯಾಪ್ತಿಯ ವಾಣಿಜ್ಯ ಪರವಾನಗಿ ಹೊಂದಿದ ತಂಬಾಕು ಉತ್ಪನ್ನಗಳ ಮಾರಾಟಗಾರರಿಗೆ ಈಗಾಗಗಲೇ ನಿರ್ದಿಷ್ಠ ಸಮಯ ನೀಡಲಾಗಿದೆ. ಕೆಲವು ಮಾಲೀಕರು ಆಯಾ ವಾರ್ಡ್‌ನ ಆರೋಗ್ಯ ನಿರೀಕ್ಷಕರ ಹತ್ತಿರ ಅರ್ಜಿ ನಮೂನೆಗಳನ್ನು ನೀಡಿದ್ದು, ಅದರಂತೆ ಉಳಿದ ಮಾಲೀಕರು ಪರವಾನಗಿ ಪಡೆಯದೆ ಇರುವುದರಿಂದ ದಾಳಿ ಕೈಗೊಂಡು ದಂಡ ವಿಧಿಸಿ ಪಾಲಿಕೆ ವ್ಯಾಪ್ತಿಯ ಎಲ್ಲಾ ವಾಣಿಜ್ಯ ಪರವಾನಗಿ ಹೊಂದಿದ ತಂಬಾಕು ಮಾರಾಟಗಾರರು ಕಡ್ಡಾಯವಾಗಿ ಪರವಾನಗಿಯನ್ನು ಪಡೆಯುವಂತೆ ತಂಡ ಸೂಚಿಸಿತು.

ತಂಡವು ತಂಬಾಕು ಪರವಾನಗಿ ನಿಯಮದಂತೆ 4 ಪ್ರಕರಣಗಳನ್ನು ದಾಖಲಿಸಿ ರೂ.2000 ಹಾಗೂ ಕೋಟ್ಪಾ-2003 ರ ಕಾಯ್ದೆಯಡಿ 6 ಪ್ರಕರಣಗಳನ್ನು ದಾಖಲಿಸಿ ರೂ.600 ಒಟ್ಟು 10 ಪ್ರಕರಣಗಳನ್ನು ದಾಖಲಿಸಿ ರೂ.2600 ದಂಡ ವಿಧಿಸಲಾಯಿತು.ಮಹಾನಗರ ಪಾಲಿಕೆಯ ಆರೋಗ್ಯ ನಿರೀಕ್ಷಕ ಪ್ರಕಾಶ, ರಮೇಶ ಚೆನ್ನಿಕಟ್ಟೆ, ಮಹಾಂತೇಶ ಕೆ, ಆರ್. ವಿನಾಯಕ ಕೋಳೂರು, ತನ್ವಿರ್, ಸಂತೋಷ ಮತ್ತು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಸತೀಶ ಕಲಹಾಳ, ಸಮಾಜ ಕಾರ್ಯಕರ್ತರಾದ ದೇವರಾಜ ಕೆ.ಪಿ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಹಾಲು ಉತ್ಪಾದನೆ ಭಾರತ ವಿಶ್ವದಲ್ಲಿ ಪ್ರಥಮ

» ಮೊದಲ ಪುಟದಿಂದ

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಾತೃಶ್ರೀ ಎನ್.ಮಂಜುನಾಥ್, ರಾಜ್ಯದ ಗದಗ ಜಿಲ್ಲೆ ಕಣಗಿನಹಾಳ್ ಗ್ರಾಮದ ಸಿದ್ದನಗೌಡ ಸಣ್ಣ ರಾಮನಗೌಡ ಪಾಟೀಲ್ ಅವರು ಪ್ರಪ್ರಥಮವಾಗಿ ಸಹಕಾರ ಸಂಘ ಸ್ಥಾಪಿಸಿ ಸಹಕಾರ ಚಳುವಳಿ ಪ್ರಾರಂಭ ಮಾಡಿದರು. ಹಾಗಾಗಿ ಇವರನ್ನು ಸಹಕಾರ ಪಿತಾಮಹ ಎಂದು ಕರೆಯಲಾಗಿದೆ. 6.44 ಲಕ್ಷ ಸಹಕಾರ ಸಂಘಗಳ ನಡೆಯುತ್ತಿದ್ದು, ಸಹಕಾರ ಕ್ಷೇತ್ರದಲ್ಲಿ ಎರಡನೇ ಸ್ಥಾನ ಕರ್ನಾಟಕ ರಾಜ್ಯ ಪಡೆದಿದೆ ಎಂದರು.

"ಶುದ್ಧ ಹಾಲು ಉತ್ಪಾದನೆ ಹಾಗೂ ಗುಣಮಟ್ಟ ಕಾಪಾಡಿಕೊಳ್ಳುವುದು ಮತ್ತು ಇತ್ತೀಚೆಗೆ ತಿದ್ದುಪಡೆಯಾದ ಕಾನೂನಿನ ಮುಖ್ಯಾಂಶಗಳನ್ನು ಭೈಲಾದಲ್ಲಿ ಅಳವಡಿಸಿಕೊಳ್ಳುವ ಕುರಿತು ಹಾಗೂ ಸಹಕಾರ ಸಂಘಗಳಲ್ಲಿ ಆಡಳಿತ ಹಾಗೂ ಲೆಕ್ಕಪತ್ರ ನಿರ್ವಹಣೆ" ಕುರಿತು ಶಿಮುಲ್ ನಿವೃತ್ತ ಸಹಾಯಕ ವ್ಯವಸ್ಥಾಪಕರಾದ ಶೇಖರಪ್ಪ, ಶಿವಾನಂದಪ್ಪ ಉಪನ್ಯಾಸ ನೀಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಸಹಕಾರ ಯೂನಿಯನ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನಾಗರಾಜ್ ಪಾಟೀಲ್, ಸಹಕಾರ ಸಂಘಗಳ ಲೆಕ್ಕ ಪರಿಶೋಧನಾ ಇಲಾಖೆ ಸಹಾಯಕ ನಿರ್ದೇಶಕ ಪಿ.ಅಂಜನಮೂರ್ತಿ, ಶಿಮುಲ್ ಉಪ ವ್ಯವಸ್ಥಾಪಕ ಕೆ.ಪಿ.ಸಂಜಯ್, ಹೊಸದುರ್ಗ ವಿಭಾಗ ವ್ಯವಸ್ಥಾಪಕ ತಿಪ್ಪೇಸ್ವಾಮಿ, ವಿಸ್ತರಣಾಧಿಕಾರಿಗಳಾದ ಕೃಷ್ಣಪ್ಪ, ರಂಜಿತಾ ಇದ್ದರು.

### ತಿಮ್ಮಪ್ಪಸ್ವಾಮಿ ದೇವಸ್ಥಾನದಲ್ಲಿ ವೈಕುಂಠ ಏಕಾದಶಿ 24ರಂದು.

» ಚಳ್ಳಕೆರೆ

ಚಳ್ಳಕೆರೆ ಹಳೇಟೌನ್‌ನ ಜಗಜೀವನರಾಂ ಬಡಾವಣೆಯಲ್ಲಿರುವ ಪುರಾತನ ದೇವಸ್ಥಾನವಾದ ಶ್ರೀತಿಮ್ಮಪ್ಪಸ್ವಾಮಿ ದೇವಸ್ಥಾನದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಡಿ.24ರ ಭಾನುವಾರ ವೈಕುಂಠ ಏಕಾದಶಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನದ ಸೇವಾ ಸಮಿತಿ ಅಧ್ಯಕ್ಷ ಜಿ.ಮಾರಣ್ಣತಿಳಿಸಿದ್ದಾರೆ. ಕಾರ್ಯದರ್ಶಿ ಟಿ.ಜಯಣ್ಣ ಈ ಬಗ್ಗೆ ಮಾಹಿತಿ ನೀಡಿ, ಡಿ.23ರ ಶನಿವಾರ ಬೆಳಗ್ಗೆ 6ರಿಂದ10ರ ತನಕ ವೈಕುಂಠ ಏಕಾದಶಿ ಪೂಜಾ ಮಹೋತ್ಸವ ಕಾರ್ಯಕ್ರಮ ಹಾಗೂ ವಿಶೇಷ ಅಲಂಕಾರವಿರುತ್ತದೆ. ಉತ್ತರ ದಿಕ್ಕಿನ ಸಪ್ತದ್ವಾರಗಳ ವೈಕುಂಠ ಏಕಾದಶಿ ಶ್ರೀಸ್ವಾಮಿಯ ದರ್ಶನವನ್ನು ಭಕ್ತರಿಗೆ ನೀಡಲಾಗುವುದು. 24ರ ಭಾನುವಾರ ವಿಶೇಷ ಆರ್ಚನೆ, ಪೂಜೆ, ಮಹಾಮಂಗಳಾರತಿ ನಂತರ ಅನ್ನಸಂಪರ್ತಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಸ್ವಾಮಿಯ ಕೃಪೆಗೆ ಪಾತ್ರರಾಗುವಂತೆ ಖಜಾಂಚಿ ಸಿ.ತಿಮ್ಮಣ್ಣ, ನಿರ್ದೇಶಕರಾದ ಪೂಜಾರಿ ತಿಮ್ಮಯ್ಯ, ತಿರುಮಲರಾಯಪ್ಪ ಮನವಿ ಮಾಡಿದ್ಧಾರೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ತಳಕು ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ಕಾರ್ಯ ಹಮ್ಮಿಕೊಂಡಿರುವುದರಿಂದ ಡಿಸೆಂಬರ್ 8 ರಂದು ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ಹಿರೇಮಲ್ಲನಹೊಳೆ ವಿ.ವಿ ಕೇಂದ್ರದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮಗಳ ಎನ್.ಜೆ.ವೈ ಮಾರ್ಗಗಳು ಮತ್ತು ನೀರಾವರಿ ಪಂಪ್ ಸೆಟ್‌ಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

### ಕೈಗಾರಿಕೆ ಸ್ಥಾಪನೆಗೆ ಜಮೀನು ಪಡೆಯಲು ಅರ್ಜಿ ಆಹ್ವಾನ

» ದಾವಣಗೆರೆ

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ಜಿಲ್ಲೆಯ ಸಾರಥಿ, ಕುರುಬರಹಳ್ಳಿ 1ನೇ ಹಂತದಕೈಗಾರಿಕಾಪ್ರದೇಶದಲ್ಲಿಉದ್ದಿಮೆದಾರರಿಂದ ಕೈಗಾರಿಕೆ ಸ್ಥಾಪನೆಗೆ ಜಮೀನು ಹಂಚಿಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ಉದ್ದಿಮೆದಾರರು ನಗರದ ಕರೂರು ಕೈಗಾರಿಕಾ ಪ್ರದೇಶದಲ್ಲಿನ ಜಿಲ್ಲಾ ಕೈಗಾರಿಕಾ ಕೇಂದ್ರದಲ್ಲಿ ಅರ್ಜಿ ನಮೂನೆಯನ್ನು ಪಡೆಯಬೇಕು. ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಅದೇ ಕಚೇರಿಗೆ ಸಲ್ಲಿಸಬೇಕು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನುಡಿ ನಮನ ಕಾಯಕ್ರಮ

» ಚಿತ್ರದುರ್ಗ

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ವತಿಯಿಂದ ಹೋರಾಟಗಾರ ಟಿ.ನುಲೇನೂರು ಎಂ.ಶಂಕರಪ್ಪನವರಿಗೆ ಡಿ.9 ರಂದು ಬೆಳಿಗ್ಗೆ 11-30 ಕ್ಕೆ ತ.ರಾ.ಸು.ರಂಗಮಂದಿರದಲ್ಲಿ ನುಡಿ ನಮನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ನುಡಿ ನಮನ ಉದ್ಘಾಟಿಸುವರು.ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಕಾರ್ಯಾಧ್ಯಕ್ಷ ಬಿ.ಎ.ಲಿಂಗಾರೆಡ್ಡಿ ಅಧ್ಯಕ್ಷತೆ ವಹಿಸಲಿದ್ದಾರೆ.ಕಮಲಮ್ಮ ನುಲೇನೂರು ಶಂಕರಪ್ಪ ಉಪಸ್ಥಿತರಿರುವರು. ಕರ್ನಾಟಕ ರಾಜ್ಯ ರೈತ ಸಂಘದ ಅಧ್ಯಕ್ಷ ಬಡಗಲಪುರ ನಾಗೇಂದ್ರ, ಕಿಸಾನ್‌ಸಭಾ ರಾಜ್ಯಾಧ್ಯಕ್ಷ ಸಿದ್ದನಗೌಡ ಪಾಟೀಲ, ಕರ್ನಾಟಕ ರಾಜ್ಯ ರೈತ ಸಂಘದ ಅಧ್ಯಕ್ಷ ಹೆಚ್. ಆರ್.ಬಸವರಾಜಪ್ಪ, ಭಾಗವಹಿಸಲಿದ್ದಾರೆ.

## ಪ್ರಮುಖ ಸುದ್ದಿ

### ರೇಣುಕಾಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಂದೋಲನ

# ವಿದ್ಯಾರ್ಥಿಗಳಲ್ಲಿ ಜ್ಞಾನದ ಕೊರತೆ ನೀಗಿಸುವುದು ಶಿಕ್ಷಕರ ಕರ್ತವ್ಯ

» ಚಳ್ಳಕೆರೆ

ಗ್ರಾಮೀಣ ಭಾಗಗಳಲ್ಲಿ ವಿದ್ಯಾರ್ಥಿಗಳಿಗೆ ಕಷ್ಟವಾದ ವಿಷಯವೆಂದರೆ ಅದು ಗಣಿತದ ವಿಷಯ. ಗಣಿತ ಎಂದಕೂಡಲೇ ವಿದ್ಯಾರ್ಥಿಗಳಲ್ಲಿ ಒಂದು ರೀತಿಯ ಭಯ ಆವರಿಸುತ್ತದೆ. ಆದರೆ, ಇಂತಹ ಗಣಿತ ಕಲಿಕಾ ಆಂದೋಲನದ ಮೂಲಕ ವಿದ್ಯಾರ್ಥಿಗಳಿಗೆ ಗಣಿತ ವಿಷಯದ ಬಗ್ಗೆ ಆತ್ಮವಿಶ್ವಾಸ ಮೂಡಿಸುತ್ತಿರುವುದು ಸಂತಸ ವಿಷಯವೆಂದು ರೇಣುಕಾಪುರ ಗ್ರಾಮ ಪಂಚಾಯಿತಿ ಅಧ್ಯಕ್ಷ ಜಾನಜ್ಜ ತಿಳಿಸಿದರು.

ಅವರು, ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ ಗ್ರಾಮ ಪಂಚಾಯಿತಿ ಮಟ್ಟದ ಶಾಲೆಗಳ ಗಣಿತ ಕಲಿಕಾ ಆಂದೋಲನ ಕಾರ್ಯಕ್ರಮ2023-24ನ್ನು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿ ಜ್ಞಾನದ ಕೊರತೆ ಉಂಟಾಗದಂತೆ ಶಿಕ್ಷಕರು ಜಾಗೃತಿ ವಹಿಸುಬೇಕು ಎಂದು ಮನವಿ ಮಾಡಿದರು. ಸಿಆರ್‌ಪಿ ದಾದಾಪೀರ್ ಮಾತನಾಡಿ, ಶಿಕ್ಷಣ ಇಲಾಖೆ ಇಂದು ಹಲವಾರು ಉತ್ತಮ ಪ್ರಯೋಗಗಳ ಮೂಲಕ ವಿದ್ಯಾರ್ಥಿಗಳ ಬುದ್ದಿ ಕೌಶಲ್ಯ ಹೆಚ್ಚಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದೆ. ಗಣಿತ ಮತ್ತು ವಿಜ್ಞಾನ ಒಂದಕ್ಕೊಂದು ಪೂರಕ ವಿಷಯವಾಗಿದ್ದು, ಎರಡೂ ವಿಷಯಗಳ ಬಗ್ಗೆ ಕಾರ್ಯಗಾರ ನಡೆಸುವ ಮೂಲಕ ಶಿಕ್ಷಣ ಇಲಾಖೆ ವಿದ್ಯಾರ್ಥಿಗಳಿಗೆ ಗಣಿತ ಕಷ್ಟವಾದ ವಿಷಯವಲ್ಲ ಎಂಬುವುದನ್ನು ಮನದಟ್ಟು ಮಾಡಿಕೊಡುತ್ತಿದೆ ಎಂದರು.



ಪಿಡಿಒ ಶಶಿಧರ ಮಾತನಾಡಿ, ಇಂದು ಶಿಕ್ಷಣದಲ್ಲಿ ಹೆಚ್ಚು ಸೂಕ್ಷ್ಮತೆ ಇದೆ. ಯಾವ ವಿದ್ಯಾರ್ಥಿ ಕಷ್ಟಪಟ್ಟು ಅಭ್ಯಾಸ ಮಾಡುತ್ತಾನೋ ಅಂತಹವರು ಮಾತ್ರ ಮುಂದೆ ಬರಲು ಸಾಧ್ಯ. ಪ್ರತಿಯೊಂದು ವಿಷಯದಲ್ಲೂ ಹೆಚ್ಚಿನ ಅಭ್ಯಾಸ ಮುಖ್ಯ ವಿದ್ಯಾರ್ಥಿಗಳು ತಮ್ಮ ಕಲಿಕಾ ಸಮಯವನ್ನು ಸದುಪಯೋಗ ಪಡಿಸಿಕೊಂಡು ಭವಿಷ್ಯದ ಬದುಕನ್ನು ಉತ್ತಮ ಪಡಿಸಿಕೊಳ್ಳುವಂತೆ ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಗಣಿತ ಅಂದೋಲನದಲ್ಲಿ ಭಾಗವಹಿಸಿ ಬಹುಮಾನ ಪಡೆದರು. ಕಸವಿಗೊಂಡನಹಳ್ಳಿ 6ನೇ ತರಗತಿಯ ಪ್ರಜ್ವಲ್ ಪ್ರಥಮ, ಅಜಿತ್ ದ್ವಿತೀಯ, ಲೇಖನ ತೃತೀಯ, ರೇಣುಕಾಪುರದ 5ನೇ ತರಗತಿಯ ನವ್ಯ ಪ್ರಥಮ, ಎನ್. ಎಸ್.ರಶ್ಮಿ ದ್ವಿತೀಯ, ದಿವ್ಯ ತೃತೀಯ, ಅಜಿತ್ ಆರ್ಯನ್ ಪ್ರಥಮ, ನಾಗೇಶ್ ದ್ವಿತೀಯ, ಮೌನಿಕ ತೃತೀಯ ಬಹುಮಾನ ಪಡೆದರು.

ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ತಿಮ್ಮರಾಜು, ಗ್ರಾಮ ಪಂಚಾಯಿತಿ ಸದಸ್ಯ ನರಸಿಂಹಪ್ಪ, ಮಂಜನಾಥ, ಕೆಂಚರಾಜ್, ತಿಪ್ಪೇಸ್ವಾಮಿ, ಮಲ್ಲೇಶಪ್ಪ, ಸಣ್ಣಸೂರಮ್ಮ, ತಿಪ್ಪೇಸ್ವಾಮಿ, ಹನುಮಣ್ಣ, ಸುಧಾಕರ, ಜ್ಯೋತಿ, ಶೃತಿ, ಟಿ.ಪವಿತ್ರ, ಭೀಮಣ್ಣ, ಜೆ.ರಾಜು, ಗುಜ್ಜಪ್ಪ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಮಹಿಳಾ ಇಲಾಖೆ ಯೋಜನೆಗಳ ಸೌಲಭ್ಯಕ್ಕೆ ಮಧ್ಯವರ್ತಿಗಳಿಂದ ದುರುಪಯೋಗ, ಮಾರು ಹೋಗದಿರಲು ಡಿ.ಡಿ.ಮನವಿ

» ದಾವಣಗೆರೆ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಮಧ್ಯವರ್ತಿಗಳು ದುರುಪಯೋಗ ಪಡಿಸಿಕೊಳ್ಳುತ್ತಿದ್ದು, ಈ ಕುರಿತು ಸಾರ್ವಜನಿಕರು ಎಚ್ಚೆತ್ತುಕೊಳ್ಳಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ವಾಸಂತಿ ಉಪ್ಪಾರ್ ತಿಳಿಸಿದ್ದಾರೆ. ವಿವಿಧ ಯೋಜನೆಗಳ ಸೌಲಭ್ಯಕ್ಕಾಗಿ ಆನ್‌ಲೈನ್ ಅಥವಾ ಭೌತಿಕವಾಗಿ ಅರ್ಜಿಗಳನ್ನು ಸಲ್ಲಿಸಲು ಸಾರ್ವಜನಿಕರು ನೇರವಾಗಿ ಇಲಾಖೆಯ ಜಿಲ್ಲಾ ಕಛೇರಿ ಅಥವಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿಗೆ ತೆರಳಿ ಸೌಲಭ್ಯಗಳ ಬಗ್ಗೆ ಮಾಹಿತಿ ಪಡೆದುಕೊಳ್ಳಬೇಕು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಥವಾ ಅಧಿಕಾರಿಗಳ ಹೆಸರಿನಲ್ಲಿ ಮಧ್ಯವರ್ತಿಗಳು ಸಾರ್ವಜನಿಕರಿಂದಹಣವಸೂಲಿಮಾಡುತ್ತಿರುವುದು ಕಂಡುಬಂದರೆ ಪೊಲೀಸ್ ಠಾಣೆ ಜಿಲ್ಲಾ ಕಛೇರಿ ದೂ.ಸಂ. 08192-264056 ಹಾಗೂ ಸಿ.ಡಿ.ಪಿ.ಓ. ಕಛೇರಿ ದೂ.ಸಂ. ದಾವಣಗೆರೆ-9945767687, ಜಗಳೂರು-9901521555, ಹರಿಹರ-7829282991, ಹೊನ್ನಾಳಿ-7022105100, ಚನ್ನಗಿರಿ-9449080657 ಗೆ ಕರೆ ಮಾಡಿ ದೂರು ನೀಡಲು ಅವರು ತಿಳಿಸಿದ್ದಾರೆ.

### ಸಿರಿಧಾನ್ಯ ಮತ್ತು ಸಾವಯವ ಮೇಳ ಅಂಗವಾಗಿ ರಾಜ್ಯ ಮಟ್ಟದ ಸಿರಿಧಾನ್ಯ ಪಾಕ ಸ್ಪರ್ಧೆ

» ಹೊಸದುರ್ಗ



ಅಂತರಾಷ್ಟ್ರೀಯ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಮೇಳ-2024ರ ಅಂಗವಾಗಿ ರಾಜ್ಯ ಮಟ್ಟದ ಸಿರಿಧಾನ್ಯ ಪಾಕ ಸ್ಪರ್ಧೆಯ ಪೂರ್ವಭಾವಿಯಾಗಿ ಜಿಲ್ಲಾ ಮಟ್ಟದಲ್ಲಿ ಸಿರಿಧಾನ್ಯ ಪಾಕ ಸ್ಪರ್ಧೆಯನ್ನು ಕೃಷಿ ಇಲಾಖೆಯಿಂದ ಏರ್ಪಡಿಸಲಾಗಿದೆ ಎಂದು ಸಹಾಯಕ ಕೃಷಿ ನಿರ್ದೇಶಕ ಸಿ.ಎಸ್.ಈಶ ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು ಸದರಿ ಸ್ಪರ್ಧೆಯಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳು / ಸಿಬ್ಬಂದಿಗಳು ಮತ್ತು ವಿಧ್ಯಾರ್ಥಿಗಳನ್ನು ಹೊರತುಪಡಿಸಿ, ಜಿಲ್ಲೆಯ ಎಲ್ಲಾ ಸಾರ್ವಜನಿಕರಿಗೆ ಭಾಗವಹಿಸಲು ಅವಕಾಶವಿರುತ್ತದೆ. ಅಭ್ಯರ್ಥಿಗಳು ತಮ್ಮ ಭಾವ ಚಿತ್ರದೊಂದಿಗೆ ಹೆಸರು, ವಿಳಾಸ ಮತ್ತು ತಯಾರಿಸುವ ಖಾದ್ಯ, ಬೇಕಾಗುವ ಸಾಮಗ್ರಿಗಳು, ತಯಾರಿಸಲು ಬೇಕಾಗಿರುವ ಸಮಯ ಹಾಗೂ ತಯಾರಿಸುವ ವಿಧಾನದ ಸಂಕ್ಷಿಪ್ತ ಮಾಹಿತಿಯೊಂದಿಗೆ ಅರ್ಜಿಯನ್ನು ಡಿಸೆಂಬರ್ 12 ರೊಳಗೆ ಖುದ್ದಾಗಿ ಅಥವಾ ಪೋಸ್ಟ್ ಮುಖಾಂತರ ಜಂಟಿ ಕೃಷಿ ನಿರ್ದೇಶಕರ ಕಚೇರಿ, ಎಪಿಎಂಸಿ ರಸ್ತೆ ಚಿತ್ರದುರ್ಗ-577501 ವಿಳಾಸಕ್ಕೆ ಕಳುಹಿಸಲು ತಿಳಿಸಿದ್ದಾರೆ.

**ಸ್ಪರ್ಧೆಯ ನಿಯಮಗಳು:** ಪ್ರತಿ ಸ್ಪರ್ಧಿಗೆ ಒಂದೇ ತಿನಿಸು ಸಿಹಿ ಅಥವಾ ಖಾರ (ಸಸ್ಯಹಾರಿ ತಿನಿಸುಗಳು ಮಾತ್ರ) ತಯಾರಿಸುವ ಅವಕಾಶವಿರುತ್ತದೆ.

ತಮ್ಮ ಅರ್ಜಿಯಲ್ಲಿ ನಮೂದಿಸಿದ ತಿನಿಸುಗಳನ್ನು, ಮನೆಯಲ್ಲಿಯೇ ತಯಾರಿಸಿ, ಡಿಸೆಂಬರ್ 13 ರಂದು ಜಂಟಿ ಕೃಷಿ ನಿರ್ದೇಶಕರ ಕಚೇರಿ ಚಿತ್ರದುರ್ಗ ಇಲ್ಲಿಗೆ ಸರಿಯಾಗಿ 11.00 ಗಂಟೆಗೆ ಪ್ರದರ್ಶಿಸುವುದು. ತಯಾರಿಸಿದ ತಿನಿಸುಗಳ ಪ್ರದರ್ಶನ, ಬಳಸಿದ ಸಾಮಗ್ರಿಗಳು, ತೋರಿಕೆ, ರುಚಿ, ಸುವಾಸನೆ, ಪೌಷ್ಠಿಕತೆಗಳ ಮೇಲೆ ಅಂತಿಮ ತೀರ್ಪು ಕೈಗೊಳ್ಳಲಾಗುವುದು. ತೀರ್ಪುಗಾರರ ನಿರ್ಧಾರವೇ ಅಂತಿಮವಾಗಿರುತ್ತದೆ. ಜಿಲ್ಲಾ ಮಟ್ಟಕ್ಕೆ ಪ್ರಥಮ ಬಹುಮಾನವಾಗಿ ಖಾರ ತಿನಿಸು ಅಥವಾ ಸಹಿ ತಿನಿಸಿಗೆ ತಲಾ ರೂ.5000/- ಬಹುಮಾನವಿರುತ್ತದೆ. ಜಿಲ್ಲಾ ಮಟ್ಟದಲ್ಲಿ ಪ್ರಥಮ ಬಹುಮಾನ ಪಡೆದವರು ಡಿಸೆಂಬರ್ 23 ರಂದು ಬೆಂಗಳೂರಿನಲ್ಲಿ ಏರ್ಪಡಿಸುವ ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಕಡ್ಡಾಯವಾಗಿ ಭಾಗವಹಿಸಬೇಕು. ಖಾದ್ಯವನ್ನು ತಯಾರಿಸಲು ಬೇಕಾಗುವ ಸಾಮಗ್ರಿಗಳನ್ನು ತಾವೇ ತೆಗೆದುಕೊಂಡು ನಿಗಧಿತ ಸ್ಥಳ ಹಾಗೂ ಸಮಯದಲ್ಲಿ ಖುದ್ದಾಗಿ ಖಾದ್ಯವನ್ನು ಅಲ್ಲಿಯೇ ತಯಾರಿಸಲು ಸಿದ್ಧರಾಗಿರಬೇಕು ಎಂದು ತಿಳಿಸಿದರುವ ಅವರು ಹೆಚ್ಚಿನ ಮಾಹಿತಿಗೆ ಕ್ಛೇರಿಯ ಸಮಯದಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳನ್ನ ಸಂಪರ್ಕಿಸಬಹುದು ಎಂದು ಅವರು ತಿಳಿಸಿದ್ದಾರೆ.

### ತಾತ್ಕಾಲಿಕ ಪಟ್ಟಿ ಪ್ರಕಟ

» ಶಿವಮೊಗ್ಗ

ಎನ್.ಹೆಚ್.ಎಂ.ನ ಐ.ಡಿ.ಎಸ್.ಪಿ. ಕಾರ್ಯಕ್ರಮದಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಒಂದು ಜಿಲ್ಲಾ ಮತ್ತು ಮೂರು ಬ್ಲಾಕ್ ಎಪಿಡೆಮಿಯಲಾಜಿಸ್ಟ್ ಹುದ್ದೆಗಳ ನೇಮಕಾತಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಐ.ಡಿ.ಎಸ್.ಪಿ. ಆಯ್ಕೆ ಸಮಿತಿ ಜಿಲ್ಲಾ ಸರ್ವೇಕ್ಷಣಾ ಘಟಕ ಕಚೇರಿಯ ನೋಟಿಸ್ ಬೋರ್ಡ್‌ನಲ್ಲಿ ಪ್ರಕಟಿಸಲಾಗಿದೆ.

# ಜನ ಚಳುವಳಿಯ ಒಡನಾಡಿ ತಿಪ್ಪೇಸ್ವಾಮಿ

» ಚಿತ್ರದುರ್ಗ

ಚಿತ್ರದುರ್ಗದ ಜನ ಚಳುವಳಿಯ ಒಡನಾಡಿ ತಿಪ್ಪೇಸ್ವಾಮಿಯವರು ಬಹುಮುಖಿ ವ್ಯಕ್ತಿಯಾಗಿದ್ದರೆಂದು ನಿವೃತ್ತ ಉಪನ್ಯಾಸಕರಾದ ಆಶೋಕ ಸಂಗೇನಹಳ್ಳಿ ಬಣ್ಣಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾಭವನದಲ್ಲಿ ತಿಪ್ಪೇಸ್ವಾಮಿಯವರು ನಮ್ಮನ್ನಗಲಿ ಒಂದು ವರ್ಷವಾದ ಹಿನ್ನಲೆಯಲ್ಲಿ ಬುಧವಾರ ಹಮ್ಮಿಕೊಂಡಿದ್ದ ಶ್ರದ್ಧಾಂಜಲಿ ಮತ್ತು ಸ್ಮರಣ ಸಭೆಯಲ್ಲಿ ಮನದ ಮಾತುಗಳ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸುಮಾರು 45 ವರ್ಷಗಳ ಕಾಲ ಹೋರಾಟವನ್ನು ಮಾಡಿಕೊಂಡು ಬಂದಿರುವ ತಿಪ್ಪೇಸ್ವಾಮಿಯವರು, ವೈಯುತ್ತಿಕ ಬದುಕಿನಲ್ಲಿ ಮಾತ್ರ ತಣ್ಣಗಾಗಿದ್ದರು, ಹೋರಾಟದಲ್ಲಿ ಮಾತ್ರ ಗಟ್ಟಿತನವನ್ನು ಮೂಡಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ನನ್ನ ಅವರ ಭೇಟಿ ನಾನು ಅತಿಥಿ ಉಪನ್ಯಾಸಕನ ಹುದ್ದೆಗೆ ಅರ್ಜಿಯನ್ನು ಹಾಕುವಾಗ ಅವರನ್ನು ಮಾತನಾಡಿಸಲಿಲ್ಲ ಎಂದು ನನ್ನ ಅರ್ಜಿಯನ್ನು ತೆಗೆದು ಹಾಕಿದ್ದರು ಆದರೂ ಸಹಾ ನಾನು ಕೆಲಸವನ್ನು ಪಡೆದೆ ಆಗ ಅವರು ಮಾತನಾಡಿಸುವ ಸಮಯ ಬಂದಿತು ಅವಾಗಿನಿಂದ ಅವರನ್ನು ನಾನು ಮಾಮ ಎನ್ನುತ್ತಿದ್ದರೆ ಅವರು ನನ್ನನ್ನು ಅಳಿಯ ಎಂದು ಮಾತನಾಡಿಸುತ್ತಿದ್ದರು ಎಂದರು.

ಅವರು ಈಗ ನಮ್ಮ ಬಳಿ ಇಲ್ಲ ಆದರೆ ಅವರು ಮಾಡಿಕೊಟ್ಟ ಹಲವಾರು ಕಾರ್ಯಗಳು ಇಂದಿಗೂ ಸಹಾ ನೆನಪಿನಲ್ಲಿ ಇವೆ. ಅವರಿಂದ ಸಹಾಯವನ್ನು ಪಡೆಯದವರಿಲ್ಲ ಅಲ್ಲದೆ ಅವರ ಮನೆಯಲ್ಲಿ ಊಟ, ಕಾಫಿ, ಟೀ, ತಿಂಡಿಯನ್ನು ತಿನ್ನದವರಿಲ್ಲ ಮನೆಗೆ ಯಾರೇ ಬಂದರೂ ಸಹಾ ಅವರನ್ನು ಸತ್ಕಾರ ಮಾಡಿಯೇ ಕಳುಹಿಸುತ್ತಿದ್ದರು ಇದರಲ್ಲಿ ಅವರ ಶ್ರೀಮತಿಯವರ ಪಾತ್ರವೂ ಸಹಾ ಹೆಚ್ಚಾಗಿದೆ. ಕೆಲವರು ಇದ್ದಾಗ ಸತ್ತಿರುತ್ತಾರೆ ಮತ್ತೇ ಕೆಲವರು ಸತ್ತಾಗ ಬದುಕಿರುತ್ತಾರೆ ಈ ವರ್ಗಕ್ಕೆ ಸೇರಿದವರು ನಮ್ಮ ತಿಪ್ಪೇಸ್ವಾಮಿಯವರು. ಅವರ ಬಗ್ಗೆ ಪುಸ್ತಕವೊಂದು ತಯಾರಾಗುತ್ತಿದೆ ಅದನ್ನು ಜ.14 ರಂದು ಹೂರತರಲಾಗುವುದು ಎಂದು ಆಶೋಕ ತಿಳಿಸಿದರು.



ಹಿರಿಯ ಪತ್ರಕರ್ತರಾದ ಉಜ್ಜನಪ್ಪ ಮಾತನಾಡಿ, ಲೋಕದಲ್ಲಿ ಎಲ್ಲರಿಗೂ ಬೇಕಾಗಿದ್ದವರು ತಿಪ್ಪೇಸ್ವಾಮಿಯವರು, ಕಾಲೇಜಿನಲ್ಲಿ ಗುಮಾಸ್ತರಾಗಿದ್ದರೂ ಸಹಾ ಬೇರೆಯವರ ಕೆಲಸವನ್ನು ಅತಿ ಹೆಚ್ಚಾಗಿ ಮಾಡುತ್ತಿದ್ದರುಸಮಾಜದಲ್ಲಿಉತ್ತಮವಾದ ಹೆಸರನ್ನು ಪಡೆದಿದ್ದರು. ಜನಪರವಾದ ಹೋರಾಟಕ್ಕೆ ಯಾವೂತ್ತು ಸಹಾ ತಮ್ಮ ಬೆಂಬಲವನ್ನು ನೀಡುತ್ತಿದ್ದರು. ಅವರ ಹೋರಾಟ ಸಮಾಜ ಮುಖಿಯಾಗಿತ್ತೇ ವಿನಹ ವ್ಯಯುತ್ತಿಕವಾಗಿರಲಿಲ್ಲ ಎಂದು ತಿಳಿಸಿದರು.

ಪತ್ರಕರ್ತರಾದ ಆಹೋಬಳಪತಿ ಮಾತನಾಡಿ, ತಿಪ್ಪೇಸ್ವಾಮಿಯವರ ಹಲವಾರು ಹೋರಾಟಗಳಲ್ಲಿ ಹಿಂದೆ ನಿಂತು ತಮ್ಮ ಬೆಂಬಲವನ್ನು ವ್ಯಕ್ತಪಡಿಸಿದ್ದರು. ಮಿತ ಭಾಷಿಗಳಾಗಿದ್ದ ಸಮಸ್ಯೆಗಳಿಗೆ ಪರಿಹಾರವನ್ನು ಕಂಡುಕೊಳ್ಳುವಲ್ಲಿ ಪ್ರಮುಖ ಪಾತ್ರವನ್ನು ವಹಿಸಿದ್ದರು. ತಮ್ಮ ಕಷ್ಠಗಳನ್ನು ಬೇರೆಯವರಿಗೆ ಹೇಳದೆ ಬೇರೆಯವರ ಕಷ್ಠಗಳಿಗೆ ಭಾಗಿಯಾಗಿ ಅದನ್ನು ನಿವಾರಣೆ ಮಾಡುವಲ್ಲಿ ಮುಂದಾಗಿದ್ದರು. ಜಿಲ್ಲೆಯ ಅಪ್ಪರ್ ಭದ್ರಾ ಹೋರಾಟದಲ್ಲಿ ಹಿಂದೆ ನಿಂತು ಅದರ ಏಳ್ಗೆಗೆ ಸೇವೆಯನ್ನು ಸಲ್ಲಿಸಿದರು. ಇಂತಹ ಮಹಾನ್ ವ್ಯಕ್ತಿಯ ಸ್ಮರಣೆ ಮಾಡುವುದು ಕರ್ತವ್ಯವಾಗಿದೆ ವಿವಿಧ ರೀತಿಯ ಹೋರಾಟಗಳನ್ನು ಜೀವಂತವಾಗಿ ಇಡುವಲ್ಲಿ ತಿಪ್ಪೇಸ್ವಾಮಿಯವರ ಪಾತ್ರ ಬಹಳವಾಗಿದೆ ಎಂದರು.ಪತ್ರಕರ್ತರಾದ ಚಳ್ಳಕೆರೆ ಬಸವರಾಜು ಮಾತನಾಡಿ, ಚಿತ್ರದುರ್ಗ ಬರಡು ಜಿಲ್ಲೆಯಾಗಿದ್ದು ಇಲ್ಲಿ ನೀರಾವರಿ ಬರಬೇಕೆಂದು ಹೋರಾಟವನ್ನು ಪ್ರಾರಂಭ ಮಾಡಿದಾಗ ಅದಕ್ಕೆ ಮಂಚೂಣಿಯಲ್ಲಿದ್ದು ವಿವಿಧ ರೀತಿಯ ಸಹಾಯವನ್ನು ನೀಡಿದರು. ತಮ್ಮ ಕೆಲಸದ ಸಮಯದಲ್ಲಿ ಹಲವಾರು ವಿದ್ಯಾರ್ಥಿಗಳಿಗೆ ಸಹಾಯವನ್ನು ಮಾಡುವುದರ ಮೂಲಕ ಉತ್ತಮವಾದ ಸ್ನೇಹಿತರಂತೆ ಕಂಡರು. ಇವರ ಹೋರಾಟ ಬೇರೆಯವರಿಗೆ ಮಾರ್ಗದರ್ಶನವಾಗಬೇಕಿದೆ. ಅವರು ಇಂದು ನಮ್ಮ ನಡುವೆ ಬದುಕಿಲ್ಲ ಆದರೆ ಅವರ ಹೋರಾಟಗಳು ಮಾತ್ರ ಇನ್ನೂ ಜೀವಂತವಾಗಿದೆ ಅದು ನಮ್ಮೆಗೆಲ್ಲರಿಗೂ ಸ್ಪೂರ್ತಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ನಿವೃತ್ತ ಪ್ರಾಂಶುಪಾಲರಾದ ಯಾದವ ರೆಡ್ಡಿ, ರಹಮಾನ್ ತಿಪ್ಪೇಸ್ವಾಮಿಯವರ ಬಗ್ಗೆ ಮಾತನಾಡಿದರು. ಪತ್ರಕರ್ತರಾದ ಗೌನಳ್ಳಿ ಗೋವಿಂದಪ್ಪ, ತಿಪ್ಪೇಸ್ವಾಮಿಯವರ ಅಕ್ಕ ಶಶಿಕಲಾ ಅವರ ಪತ್ನಿ ಪುತ್ರ ಮತ್ತು ಪುತ್ರಿ ಹಾಗೂ ಮೊಮ್ಮಕ್ಕಳು ಭಾಗವಹಿಸಿದ್ದರು. ಕುಮಾರ ಸಮತಾದಳ ಕಾರ್ಯಕ್ರಮ ನಿರೂಪಿಸಿದರು.

# ಪರಿನಿರ್ವಾಣ ದಿನ ಉದ್ಘಾಟಿಸಿದ ಆಂಜನೇಯ

» ಚಿತ್ರದುರ್ಗ

ಡಾ.ಬಿ.ಆರ್.ಅಂಬೇಡ್ಕರ್ ವಿಶ್ವಮೆಚ್ಚಿದ ಶ್ರೇಷ್ಠ ಜ್ಞಾನಿ ಎಂದು ಸಮಾಜ ಕಲ್ಯಾಣ ಇಲಾಖೆ ಮಾಜಿ ಸಚಿವ ಹೆಚ್.ಆಂಜನೇಯ ಹೇಳಿದರು.

ಭೀಮಯಾತ್ರೆ ಬಳಗದ ಸದಸ್ಯರಿಂದ ಬುಧವಾರ ನಡೆದ ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರ 67 ನೇ ಪರಿನಿರ್ವಾಣ ದಿನ ಉದ್ಘಾಟಿಸಿ ಮಾತನಾಡಿದರು.

ಶಿಕ್ಷಣ, ಸಂಘಟನೆ, ಹೋರಾಟ ಅಂಬೇಡ್ಕರ್‌ರವರ ಮೂಲ ಮಂತ್ರವಾಗಿತ್ತು. ಅಭಿವೃದ್ದಿಯ ಹರಿಕಾರ ಅಂಬೇಡ್ಕರ್‌ರವರ ಅನುಯಾಯಿ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಐದು ಉಚಿತ ಗ್ಯಾರೆಂಟಿಗಳನ್ನು ರಾಜ್ಯದ ಜನತೆಗೆ ಘೋಷಿಸಿದ್ದಾರೆ. ನಾನು ಸಮಾಜ ಕಲ್ಯಾಣ ಮಂತ್ರಿಯಾಗಿದ್ದಾಗ ಹೆಣ್ಣು ಮಕ್ಕಳಿಗೆ ಅನೇಕ ಹಾಸ್ಟೆಲ್‌ಗಳನ್ನು ತೆರೆದು ಶಿಕ್ಷಣಕ್ಕೆ ಅನುಕೂಲ ಮಾಡಿಕೊಟ್ಟಿದ್ದೇನೆ. ಎಲ್ಲವನ್ನು ಬಳಸಿಕೊಂಡು ಶಿಕ್ಷಣವಂತರಾಗುವಂತೆ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಗಾಂಧಿ, ನೆಹರು ಇವರುಗಳು ಡಾ.ಬಿ.ಆರ್. ಅಂಬೇಡ್ಕರ್‌ಗೆ ಸಂವಿಧಾನ ಬರೆಯುವ ಅಕವಾಶ ಕೊಟ್ಟರು. ಅನೇಕ ರಾಷ್ಟ್ರಗಳ ಸಂವಿಧಾನ ಓದಿಕೊಂಡು ಭಾರತಕ್ಕೆ ಭದ್ರವಾದ ಸಂವಿಧಾನ ರಚಿಸಿಕೊಡುಗೆಯಾಗಿನೀಡಿದ್ದಾರೆ.ಮಹಿಳೆಯರಿಗೆ ಮೀಸಲಾತಿಗಾಗಿ ಹಿಂದೂ ಕೋಡ್ ಬಿಲ್ ಜಾರಿಗೆ ತಂದಾಗ ಪಾರ್ಲಿಮೆಂಟ್‌ನಲ್ಲಿ ಅದು ಪಾಸ್ ಆಗಲಿಲ್ಲ. ಆಗ ಬೇಸರಗೊಂಡು ಕೇಂದ್ರ ಮಂತ್ರಿ ಸ್ಥಾನಕ್ಕೆ ರಾಜಿನಾಮೆ ನೀಡಿ ಹೊರಬಂದರು ಎನ್ನುವುದನ್ನು ಸ್ಮರಿಸಿದರು.



ಮಾಜಿ ಶಾಸಕ ಜಿ.ಹೆಚ್.ತಿಪ್ಪಾರೆಡ್ಡಿ ಮಾತನಾಡಿ ದೇಶಕ್ಕೆ ಸಂವಿಧಾನವನ್ನು ಕೊಡುಗೆಯಾಗಿ ನೀಡಿರುವ ಡಾ.ಬಿ.ಆರ್.ಅಂಬೇಡ್ಕರ್‌ರವರ ಆಚಾರ ವಿಚಾರ ತತ್ವ ಸಿದ್ಧಾಂತಗಳನ್ನು ಪ್ರತಿಯೊಬ್ಬರು ಜೀವನದಲ್ಲಿ ಪಾಲಿಸಿದರೆ ಅದುವೆ ಅವರಿಗೆ ಸಲ್ಲುವ ನಿಜವಾದ ಗೌರವ ಎಂದು ಹೇಳಿದರು.

ಜಿಲ್ಲಾಧಿಕಾರಿ ಶ್ರೀಮತಿ ದಿವ್ಯಪ್ರಭು ಜಿ.ಆರ್.ಜೆ. ಮಾತನಾಡುತ್ತ ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಶೋಷಿತರ ವಿರುದ್ದ ನಡೆದ ಅನ್ಯಾಯದ ವಿರುದ್ದ ಹೋರಾಡಿದ ಡಾ.ಬಿ.ಆರ್.ಅಂಬೇಡ್ಕರ್ ಶಿಕ್ಷಣವನ್ನೇ ಅಸ್ತ್ರವನ್ನಾಗಿ ನೀಡಿದರು. ನುಡಿದಂತೆ ನಡೆದು ಬದುಕಿದವರು. ಶಿಕ್ಷಣ, ಸಂಘಟನೆ, ಹೋರಾಟ ಬದುಕಿಗೆ ಬುನಾದಿ ಎನ್ನುವುದನ್ನು ತೋರಿಸಿಕೊಟ್ಟಿದ್ದಾರೆ. ವಿಶ್ವಜ್ಞಾನಿಯಾಗಿ, ಸಂವಿಧಾನಶಿಲ್ಪಿಯಾಗಿ ಇಂದಿಗೂ ಎಲ್ಲರ ಮನದಲ್ಲಿ ಉಳಿದಿದ್ದಾರೆಂದರು.

ಭೀಮಯಾತ್ರೆ ಬಳಗದ ಅಧ್ಯಕ್ಷ ನ್ಯಾಯವಾದಿ ಎಸ್.ರವೀಂದ್ರ, ಸದಸ್ಯರುಗಳಾದ ನ್ಯಾಯವಾದಿ ಜಿ.ಎಸ್.ಶರಣಪ್ಪ, ಕುಮಾರಸ್ವಾಮಿ, ಸತೀಶ ಟಿ, ಮಂಜುನಾಥ ಎಸ್. ಕೃಷ್ಣಮೂರ್ತಿ, ರಘು, ನಟರಾಜ್, ರಾಘವೇಂದ್ರ, ಸಂತೋಷ್, ಅಭಿ, ಕುಮಾರಸ್ವಾಮಿ, ಅನಿಲ್‌ಕೋಟಿ, ಪ್ರೇಮನಾಥ್, ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು, ನಗರಸಭೆ ಪೌರಾಯುಕ್ತರಾದ ರೇಣುಕ ಸೇರಿದಂತೆ ವಿವಿಧ ಹಾಸ್ಟೆಲ್‌ಗಳ ಸಹಸ್ರಾರು ವಿದ್ಯಾರ್ಥಿ, ವಿದ್ಯಾರ್ಥಿನಿಯರು ಪರಿನಿರ್ವಾಣ ದಿನದಲ್ಲಿ ಭಾಗವಹಿಸಿದ್ದರು.

ಅಂಬೇಡ್ಕರ್ ಪ್ರತಿಮೆಯನ್ನು ಬಣ್ಣ ಬಣ್ಣದ ಹೂವು, ಹಾರ, ಸೀರಿಯಲ್ ಲೈಟ್‌ಗಳಿಂದ ಕಲರ್‌ಫುಲ್ ಆಗಿ ಅಲಂಕರಿಸಲಾಗಿತ್ತು.

# ಬೆಂಗಳೂರಿನಿಂದ ಬೆಳಗಾವಿಯ ಸುವರ್ಣಸೌಧಕ್ಕೆ ಜಾಥ




» ಚಿತ್ರದುರ್ಗ

ನ್ಯಾಯಯುತ ಸಂವಿಧಾನಬದ್ದ ಹಕ್ಕುಗಳನ್ನು ಸರ್ಕಾರ ಕೂಡಲೆ ಪರಿಗಣಿಸಿ ಈಡೇರಿಸುವಂತೆ ಒತ್ತಾಯಿಸಿ ಬೆಂಗಳೂರಿನ ವಿಧಾನಸೌಧದಿಂದ ಬೆಳಗಾವಿಯ ಸುವರ್ಣಸೌಧಕ್ಕೆ ಹೊರಟಿರುವ ಜಾಥ ಗುರುವಾರ ಚಿತ್ರದುರ್ಗಕ್ಕೆ ಆಗಮಿಸಿತು.

ಒನಕೆ ಓಬವ್ವ ವೃತ್ತದಲ್ಲಿ ಜಾಥವನ್ನು ಉದ್ಘಾಟಿಸಿ ಮಾತನಾಡಿದ ಎಸ್.ಡಿ.ಪಿ.ಐ. ರಾಜ್ಯಾಧ್ಯಕ್ಷ ಅಬ್ದುಲ್ ಮಜೀದ್ ಕಾಂತರಾಜ್ ಆಯೋಗದ ವರದಿ ತಯಾರಿಸಿ ಸರ್ಕಾರಕ್ಕೆ ಸಲ್ಲಿಸಿ ಅನೇಕ ವರ್ಷಗಳೇ ಕಳೆದಿದ್ದರೂ ಇನ್ನು ಜಾರಿಗೆ ತರುವಲ್ಲಿ ಆಳುವ ಸರ್ಕಾರಗಳು ಮೀನಾಮೇಷ ಎಣಿಸುತ್ತಿವೆ. ಹಾಗಾಗಿ ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಕಾಂತರಾಜ್ ಆಯೋಗದ ವರದಿಯನ್ನು ಕೂಡಲೆ ಸ್ವೀಕರಿಸಬೇಕು ಎಂದು ಒತ್ತಾಯಿಸಿದರು.

ಪರಿಶಿಷ್ಟರ ಒಳಮೀಸಲಾತಿ ಹಂಚಿಕೆಯಲ್ಲಿ ಅಸ್ಪೃಶ್ಯರು ಎನ್ನುವ ಕಾರಣಕ್ಕಾಗಿ ಸಮುದಾಯಕ್ಕೆ ಅನ್ಯಾಯವಾಗುತ್ತಲೆ ಬರುತ್ತಿದೆ. ಸದಾಶಿವ ಆಯೋಗದ ವರದಿ ಜಾರಿಗಾಗಿ ಕಳೆದ 30 ವರ್ಷಗಳಿಂದಲೂ ಹೋರಾಟ ಮಾಡಿಕೊಂಡು ಬರಲಾಗುತ್ತಿದೆ. ಶೀಘ್ರವೇ ವರದಿಯನ್ನು ರಾಜ್ಯ ಸರ್ಕಾರ ಕೇಂದ್ರಕ್ಕೆ ಶಿಫಾರಸ್ಸು ಮಾಡುವಂತೆ ಆಗ್ರಹಿಸಿದರು.

ರಾಜ್ಯದಲ್ಲಿ ಮುಸಲ್ಮಾನರಿಗಿದ್ದ 2 ಬಿ.ಯಡಿ ನಾಲ್ಕು ಪರ್ಸೆಂಟ್ ಮೀಸಲಾತಿಯನ್ನು ಹಿಂದಿನ ಬಸವರಾಜ್ ಬೊಮ್ಮಾಯಿ ಸರ್ಕಾರ ರದ್ದುಪಡಿಸಿತ್ತು. ಈಗಿನ ರಾಜ್ಯ ಕಾಂಗ್ರೆಸ್ ಸರ್ಕಾರ 2 ಬಿ. ಮೀಸಲಾತಿಯನ್ನು ಪುನರ್ ಘೋಷಿಸಿ ಶೇ.ನಾಲ್ಕರಿಂದ ಎಂಟು ಪರ್ಸೆಂಟ್‌ಗೆ ಹೆಚ್ಚಿಸುವಂತೆ ಮನವಿ ಮಾಡಿದರು.

ಎಸ್.ಡಿ.ಪಿ.ಐ. ಜಿಲ್ಲಾಧ್ಯಕ್ಷ ಬಾಳೆಕಾಯಿ ಶ್ರೀನಿವಾಸ್ ಜಾಥ ಉದ್ದೇಶಿಸಿ ಮಾತನಾಡಿ ದಲಿತರು, ಮುಸಲ್ಮಾನರು, ಹಿಂದುಳಿದಿರುವ ಮತಗಳನ್ನು ಪಡೆದು ಗೆದ್ದಿರುವ ಚಿತ್ರದುರ್ಗ ಶಾಸಕ ಬೆಳಗಾವಿಯ ಸುವರ್ಣಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಕಾಣುತ್ತಿಲ್ಲ ಎಂದು ಅವರು ಹೇಳಿದರು.

### ಆಗ್ನೇಯ ಶಿಕ್ಷಕರ ಕ್ಷೇತ್ರಕ್ಕೆ ಲೋಕೇಶ್ ತಾಳಿಕಟ್ಟೆ ಅಭ್ಯರ್ಥಿ

» ಮೊದಲ ಪುಟದಿಂದ

ಖಾಸಗಿ ಬಂಡವಾಳ ಶಾಹಿಗಳಿಗೆ ಶಿಕ್ಷಣವನ್ನು ಮಾರಿಕೊಳ್ಳುವ ಮೂಲಕ ದೇಶದ ಭವಿಷ್ಯದ ಬುನಾದಿಯನ್ನೇ ಅಭದ್ರಗೊಳಿಸುವ ಕಾರ್ಯ ಮಾಡಿ, ದಿನಕ್ಕೊಂದು ನಿಯಮ ರೂಪಿಸಿ, ಶಾಲೆಗಳನ್ನು ಮುಚ್ಚಿ, ಬಂಡವಾಳ ಶಾಹಿ ಕಾರ್ಪೊರೇಟ್ ಸಂಸ್ಥೆಗಳ ಸ್ಥಾಪನೆಗೆ ದಾರಿ ಮಾಡಿಕೊಡುತ್ತಿದ್ದು, ಈ ಎಲ್ಲಾ ಸಮಸ್ಯೆಗಳ ಈಡೇರಿಕೆಗಾಗಿ ಶಿಕ್ಷಕರೇ ಆಗಿರುವ ಲೋಕೇಶ್ ತಾಳಿಕಟ್ಟೆ ಆಗ್ನೇಯ ಶಿಕ್ಷಕರ ಕ್ಷೇತ್ರದಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಲಿದ್ದಾರೆಂದರು.

## ಪ್ರಮುಖ ಸುದ್ದಿ

# ಸಹಕಾರ ಕ್ಷೇತ್ರದ ಬೆಳವಣಿಗೆಗೆ ವಿಶ್ವಾಸಾರ್ಹತೆ ಮುಖ್ಯ

» ಹೊಸದುರ್ಗ

ಸಹಕಾರ ಕ್ಷೇತ್ರದ ಬೆಳವಣಿಗೆಗೆ ವಿಶ್ವಾಸಾರ್ಹತೆ ಮುಖ್ಯ

ಸಹಕಾರ ಕ್ಷೇತ್ರದ ಬೆಳವಣಿಗೆಗೆ ಬಹು ಮುಖ್ಯವಾಗಿ ವಿಶ್ವಾಸಾರ್ಹತೆ ಅಗತ್ಯ ನಾವು ಪ್ರಶಸ್ತಿ ಪಡೆಯುವುದು ಮುಖ್ಯವಲ್ಲ,ಸಹಕಾರ ಸಂಘಗಳನ್ನ ಪ್ರಗತಿನಯತ್ತ ಕತಗೆದುಕೊಂಡು ಹೋಗುವುದು ಮುಖ್ಯ ಎಂದು ವಿಶ್ವಬಂಧು ಪತ್ತಿನ ಸಹಕಾರ ಸಂಘದ ನಿರ್ದೇಶಕ ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತ ಬನಸೀಹಳ್ಳಿಅಜ್ಜಪ್ಪ ಹೇಳಿದರು.

ಪಟ್ಟಣದ ವಿಶ್ವಬಂಧು ಪತ್ತಿನ ಸಹಕಾರ ಸಂಘದ ವತಿಯಿಂದ ಆಯೋಜಿಸಲಾಗಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದರು.ಯಾವುದೇ ಕ್ಷೇತ್ರವಾಗಲಿ ಆ ಕ್ಷೇತ್ರದಲ್ಲಿ ಪ್ರಗತಿ ಸಾಧಿಸಿದರೆ ಪ್ರಶಸ್ತಿಗಳು ತಾನಾಗಿಯೇ ಹುಡುಕಿಕೊಂಡು ಬರುತ್ತವೆ ಎಂದು ಅಭಿಪ್ರಾಯಿಸಿದ ಅವರು

ಸಾಲ ಪಡೆದವರು ಸಕಾಲದಲ್ಲಿ ಮರುಪಾವತಿ ಮಾಡುವುದರಿಂದ ಸಹಕಾರ ಸಂಘಗಳು ಉಳಿದು ಬೆಳೆಯಲು ಅವಕಾಶವಾಗುತ್ತದೆ. ಒಳ್ಳೆ ಅಭಿಪ್ರಾಯ ಹೊಂದಿರುವ ಸದುದ್ದೇಶದ ಗ್ರಾಹಕರು ಬಹಳ ಮುಖ್ಯ, ಸಹಕಾರಿ ಸಂಘಗಳು ಗ್ರಾಹಕರಿಗೆ ಸೇರಿದ ಸಂಸ್ಥೆ ಎಂಬುದೇ ಸಹಕಾರಿ ಕ್ಷೇತ್ರದ ಸಂದೇಶವಾಗಿದೆ,ಸಹಕಾರಿ ಕ್ಷೇತ್ರದಲ್ಲಿ ಆತ್ಮೀಯತೆ ಇರಬೇಕು. ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ವ್ಯವಹರಿಸುವುದು ಬಹಳ ಕಷ್ಟಕರ ಸಂಗತಿಯಾಗಿದೆ ಎಂಬ ವಿಷಾದ ವ್ಯಕ್ತಪಡಿಸಿದರು.



ಈ ಸಂಧರ್ಬದಲ್ಲಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎಸ್.ಕೆ.ಪರಮೇಶ್ವರಯ್ಯ, ಉಪಾಧ್ಯಕ್ಷ ರಾಮೇಗೌಡ ಹಾಗೂ ನಿರ್ದೇಶಕರುಗಳು ಮತ್ತು ಸಿಬ್ಬಂಧಿ ವರ್ಗದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T